ವಿಜಯಪುರ | ಸಂಪುಟ 02 | ಸಂಚಿಕೆ 232 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶುಕ್ರವಾರ, ನವೆಂಬರ್ 08, 2024



"ಶಾಲೆ, ಬಾಲಮಂದಿರ & ಅಂಗನವಾಡಿಗಳ ಮಕ್ಕಳಿಗೆ ಗುತ್ತಿಗೆದಾರರು ಗುಣಮಟ್ಟದ ಆಹಾರ ಪೂರೈಸಬೇಕು. ಕಳಪೆ ಮಟ್ಟದ್ದು ಕಂಡುಬಂದರೆ ಸಾರ್ವಜನಿಕರು ನಮ್ಮ ಕಾರ್ಯಾಲಯಕ್ಕೆ ಮಾಹಿತಿ ನೀಡಿ. ಅಂತಹ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು."

- ಸಂಗಮೇಶ ಬಬಲೇಶ್ವರ
ಅಧ್ಯಕ್ಷರು, ಕರ್ನಾಟಕ ಬಾಲ ವಿಕಾಸ ಅಕಾಡೆಮಿ

### ವಕ್ಫ್ ಆಸ್ತಿ ವಿವಾದ | ಹುಬ್ಬಳ್ಳಿ, ವಿಜಯಪುರಕ್ಕೆ ಎಕಅ ಅಧ್ಯಕ್ಷ ಜಗದಾಂಬಿಕಾ ಪಾಲ್ ಭೇಟಿ | ರೈತರಿಂದ 500 ಅಹವಾಲು ಸ್ವೀಕಾರ

# ವಕ್ಫ್ ಆಸ್ತಿ ವಿವಾದಕ್ಕೆ ಯಾರು ಹೊಣೆ? :ಪಾಲ್ ಅಸಮಾಧಾನ

ವಿಜಯಪುರ: ವಕ್ಫ್ ಆಸ್ತಿ ವಿವಾದಕ್ಕೆ ಸಂಬಂಧಿಸಿದಂತೆ ಸಂಸದ ಜಗದಾಂಬಿಕಾ ಪಾಲ್ ಅಧ್ಯಕ್ಷತೆಯ ವಕ್ಫ್ ಕಾಯ್ದೆ ತಿದ್ದುಪಡಿ ಮಸೂದೆಯ ಜಂಟಿ ಸಂಸದೀಯ ಸಮಿತಿಯು ಶುಕ್ರವಾರ ಸುಮಾರು 500 ಅಹವಾಲುಗಳನ್ನು ಆಲಿಸಿತು.

ಹುಬ್ಬಳ್ಳಿ, ವಿಜಯಪುರ ಮತ್ತು ಬೆಳಗಾವಿಗೆ ಭೇಟಿ ನೀಡಿದ ಪಾಲ್, ರೈತರು ಹಾಗೂ ವಿವಿಧ ಸಾಮಾಜಿಕ ಸಂಘಟನೆಗಳ ಸದಸ್ಯರನ್ನು ಭೇಟಿ ಮಾಡುವ ಮೂಲಕ ವಕ್ಫ್ ಭೂಮಿ ವಿವಾದಕ್ಕೆ ಸಂಬಂಧಿಸಿದಂತೆ ಅಹವಾಲು ಸ್ವೀಕರಿಸಿದರು.ಈ ವೇಳೆ ತಮ್ಮ ಭೂಮಿಯನ್ನು ವಕ್ಫ್ ಮಂಡಳಿ ಆಸ್ತಿ ಎಂದು ಹೇಳಲಾಗುತ್ತಿದೆ ಎಂದು ವಿಜಯಪುರ, ಬೀದರ್, ಕಲಬುರಗಿ, ಹುಬ್ಬಳ್ಳಿ, ಬಾಗಲಕೋಟೆ ಮತ್ತು ಬೆಳಗಾವಿಯ ರೈತರಿಂದ ಸುಮಾರು 500 ಅಹವಾಲುಗಳನ್ನು ಜಗದಾಂಬಿಕಾ ಪಾಲ್ ಸ್ವೀಕರಿಸಿದರು ಎಂದು ಸಂಸದ ತೇಜಸ್ವಿ ಸೂರ್ಯ ಅವರ ಕಚೇರಿಯ ಹೇಳಿಕೆಯಲ್ಲಿ ತಿಳಿಸಲಾಗಿದೆ.ಸತ್ಯ ಶೋಧನೆ ಮತ್ತು ನೊಂದವರನ್ನು ಭೇಟಿ ಮಾಡಲು ರಾಜ್ಯಕ್ಕೆ ಭೇಟಿ ನೀಡಿದ್ದೇನೆ. ರೈತರು ಹಾಗೂ ವಿವಿಧ ಸಂಘಟನೆಗಳಿಂದ ಸಂಬಂಧಿಸಿದ ದಾಖಲೆಗಳು, ಮನವಿ ಪತ್ರಗಳನ್ನು ಸ್ವೀಕರಿಸಿದ್ದು, ಅವೆಲ್ಲವನ್ನೂ ಜಂಟಿ ಸಂಸದೀಯ ಸಮಿತಿಯಲ್ಲಿ ಚರ್ಚಿಸಿ ವರದಿಯಲ್ಲಿ ಸೇರಿಸಲಾಗುವುದು ಎಂದು ಜಗದಾಂಬಿಕಾ ಪಾಲ್ ಭರವಸೆ ನೀಡಿದರು. ರೈತರ ಭೂಮಿ ತೆರವುಗೊಳಿಸದಂತೆ ರಾಜ್ಯ ಸರಕಾರ ಕಂದಾಯ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರೂ ಸಮಸ್ಯೆ ಬಗೆಹರಿಯುವುದೇ? ದಾಖಲೆ ತಿದ್ದುವಿಕೆ, ಮ್ಯುಟೇಶನ್, ವಕ್ಫ್ ದಾಖಲೆ ಬದಲಾವಣೆ ಮಾಡಿರುವುದು ಖಾತ್ರಿಯಾಗಿದೆ. ರಾಜ್ಯ ಸರಕಾರ ಏನು ಮಾಡುತ್ತಿದೆ. ಇದಕ್ಕೆ ಯಾರು ಹೊಣೆ?" ಎಂದು ಅವರು ಪ್ರಶ್ನಿಸಿದರು.

ಮೊದಲಿಗೆ ವಿಜಯಪುರ ಜಿಲ್ಲೆಯ ಒಂದು ಭಾಗದ ರೈತರು ತಮ್ಮ ಜಮೀನುಗಳನ್ನು ವಕ್ಫ್ ಆಸ್ತಿ ಎಂದು ಗುರುತಿಸಲಾಗಿದೆ ಎಂಬ ಆರೋಪ ಮಾಡಿದ್ದರು. ತದನಂತರ ಇತರ ಕೆಲವು ಸ್ಥಳಗಳಿಂದ ಇದೇ ರೀತಿಯ ಆರೋಪಗಳು ಬಂದಿವೆ.

ಮಠಗಳಂತಹ ಕೆಲವು ಸಂಘಟನೆಗಳು ಮತ್ತು ಧಾರ್ಮಿಕ ಸಂಸ್ಥೆಗಳು ಕೂಡ ಇದೇ ರೀತಿಯ



ಆರೋಪಗಳನ್ನು ಮಾಡುತ್ತಿವೆ. ಗಲಾಟೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ನೀಡಿರುವ ಎಲ್ಲಾ ನೋಟಿಸ್‌ಗಳನ್ನು ತಕ್ಷಣವೇ ಹಿಂಪಡೆಯಬೇಕು ಮತ್ತು ಯಾವುದೇ ಸೂಚನೆ ಇಲ್ಲದೆ ಭೂ ದಾಖಲೆಗಳಲ್ಲಿ ಅನಧಿಕೃತ ತಿದ್ದುಪಡಿಗಳನ್ನು ರದ್ದುಗೊಳಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ಮಧ್ಯೆ ಕಾಂಗ್ರೆಸ್ ಸರ್ಕಾರ ಲ್ಯಾಂಡ್ ಜಿಹಾದ್‌ನಲ್ಲಿ ತೊಡಗಿದೆ ಎಂದು ಆರೋಪಿಸಿ ಪ್ರತಿಪಕ್ಷ ಬಿಜೆಪಿ ಪ್ರತಿಭಟನೆ ನಡೆಸುತ್ತಿದೆ. ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರನ್ನು ಸಂಪುಟದಿಂದ ವಜಾಗೊಳಿಸುವಂತೆಯೂ ಪಕ್ಷ ಒತ್ತಾಯಿಸಿದೆ.



"ಸಂಸದೀಯ ಸಮಿತಿ ಭೇಟಿ ನೀಡಿದ್ದಂತೆ ಕಾಣುತ್ತಿಲ್ಲ. ಅಧ್ಯಕ್ಷರು ನಿಯಮ ಮೀರಿ ಏಕಾಂಗಿಯಾಗಿ ಭೇಟಿ ನೀಡುತ್ತಿರುವುದು ರಾಜಕೀಯ ಪ್ರೇರಿತ ಭೇಟಿ ಅನಿಸುತ್ತದೆ. ಸಮಿತಿಯ ಸದಸ್ಯರು ಕೂಡ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸಮಿತಿಯಲ್ಲಿ ಭೇಟಿಯನ್ನು ನಿರ್ಧರಿಸಬೇಕು, ಏಕಪಕ್ಷೀಯವಾಗಿ ಭೇಟಿ ನೀಡಲು ಸಾಧ್ಯವಿಲ್ಲ."


- ಡಾ. ಜಿ.ಪರಮೇಶ್ವರ್
ಗೃಹ ಸಚಿವರು



"ಪಾಲ್ ರಾಜ್ಯ ಭೇಟಿ 'ನಾಟಕ ಕಂಪನಿಯ ಟೂರ್' ಮತ್ತು ರಾಜಕೀಯ ಪ್ರೇರಿತ. ರಾಜ್ಯದಲ್ಲಿ ನಡೆಯುತ್ತಿರುವ ಮೂರು ಕ್ಷೇತ್ರಗಳ ಉಪಚುನಾವಣೆ ಹಾಗೂ ನೆರೆಯ ಮಹಾರಾಷ್ಟ್ರದಲ್ಲಿನ ವಿಧಾನಸಭೆ ಚುನಾವಣೆ ಮೇಲೆ ಕಣ್ಣಿಟ್ಟು ಪಾಲ್ ರಾಜ್ಯಕ್ಕೆ ಭೇಟಿ ನೀಡಿದ್ದಾರೆ. ಎಕಅ ಅಧ್ಯಕ್ಷರು ರಾಜಕೀಯ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದು, ಇದು ಜಂಟಿ ಸಂಸದೀಯ ಸಮಿತಿ ಭೇಟಿ ಅಲ್ಲ, ಬಿಜೆಪಿ ಸದಸ್ಯರು ಬಂದಿದ್ದು, ರಾಜಕೀಯ ಮಾಡುತ್ತಿದ್ದಾರೆ."

- ಡಿ.ಕೆ.ಶಿವಕುಮಾರ್
ಉಪ ಮುಖ್ಯಮಂತ್ರಿಗಳು

## ಇದನ್ನು ಮಾಡುವ ಆತುರವೇನಿತು? :ಪಾಲ್



ವಿಜಯಪುರದಲ್ಲಿ ಪ್ರತಿಭಟನಾಕಾರರನ್ನುದ್ದೇಶಿಸಿ ಮಾತನಾಡಿದ ಜಗದಾಂಬಿಕಾ ಪಾಲ್, ಪಾಲ್, ವಕ್ಫ್ ಅದಾಲತ್ ನಡೆಸಿ, ವಕ್ಫ್ ಆಸ್ತಿ ಎಂದು ನಿರ್ಧರಿಸಲು "ಪಾರದರ್ಶಕ ವಕ್ಫ್ ಕಾನೂನು ಜಾರಿಗೆ ಬರುತ್ತಿರುವಾಗ ಇದನ್ನು ಮಾಡುವ ಆತುರವೇನಿತು? ರೈತರು, ವಿವಿಧ ಸಂಘಟನೆಗಳು ಮನವಿ ಸಲ್ಲಿಸಿದ್ದು, ಇಂತಹ ಘಟನೆಗಳು ರಾಜ್ಯದಲ್ಲಿ ಏಕೆ ನಡೆದಿದೆ ಎಂಬುದರ ಬಗ್ಗೆ ರಾಜ್ಯ ಸರ್ಕಾರ ಉತ್ತರ ನೀಡಬೇಕಾಗಿದೆ ಎಂದು ಎಕಅ ಅಧ್ಯಕ್ಷ ಜಗದಾಂಬಿಕಾ ಪಾಲ್ ಹೇಳಿದರು.

1920 ಮತ್ತು 1930ರಿಂದ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರಿಗೆ ಕಾನೂನು ಜಾರಿಯಾಗುವ ಮುನ್ನವೇ ನೋಟಿಸ್ ನೀಡುತ್ತಿರುವುದು ಏಕೆ? ನೋಟಿಸ್ ನೀಡುವುದರ ಜೊತೆಗೆ ಆರ್‌ಟಿಸಿ, ಪಹಣಿ ಮತ್ತು ಮ್ಯುಟೇಶನ್ ರಿಜಿಸ್ಟರ್‌ಗಳಲ್ಲಿ ಬದಲಾವಣೆಗಳನ್ನು ಮಾಡಲಾಗಿದೆ ಎಂದು ರೈತರು ಹೇಳಿಕೊಂಡಿದ್ದಾರೆ. ಕರ್ನಾಟಕ ವಕ್ಫ್ ಮಂಡಳಿಯು ರಾಜ್ಯಾದ್ಯಂತ ಕನಿಷ್ಠ 53 ಐತಿಹಾಸಿಕ ಪುರಾತತ್ವ ಸಮೀಕ್ಷೆ ಸಂರಕ್ಷಿತ ಸ್ಥಳಗಳನ್ನು ಕೂಡಾ ತಮ್ಮ ಆಸ್ತಿ ಎಂದು ಹೇಳಿಕೊಂಡಿದೆ. ಇದು ವಕ್ಫ್ ಆಸ್ತಿ ಹೇಗೆ? ಎಂದು ಪ್ರಶ್ನಿಸಿದರು.

## 1500ಮೀ. ಓಟ: ಕುಪ್ರೇಂದ್ರ ಯಂಪುರೆ ಪ್ರಥಮ



ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಜಿಲ್ಲೆಯ ಅರಕೇರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರೌಢಶಾಲಾ ಕ್ರೀಡಾಕೂಟದಲ್ಲಿ ಭಾಗವಹಿಸಿದ ಇಂಡಿ ಮುರಾರ್ಜಿ ದೇಸಾಯಿ ಶಾಲೆಯ ವಿದ್ಯಾರ್ಥಿ ಕುಪ್ರೇಂದ್ರ ಯಂಪುರೆ 1500ಮೀ. ಓಟದಲ್ಲಿ ಹಾಗೂ ಎತ್ತರ ಜಿಗಿತ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ವಿದ್ಯಾರ್ಥಿಯ ಈ ಸಾಧನೆಗೆ ಶಾಲೆಯ ಪ್ರಾಂಶುಪಾಲರು, ದೈಹಿಕ ಶಿಕ್ಷಕರು, ಸಿಬ್ಬಂದಿಯ ವರ್ಗ, ಪಾಲಕರು ಹಾಗೂ ಶಾಲೆಯ ವಿದ್ಯಾರ್ಥಿಗಳು ಅಭಿನಂದಿಸಿ ಮುಂದೆ ನಡೆಯುವ ರಾಜ್ಯ ಮಟ್ಟದ ಪ್ರೌಢಶಾಲಾ ಕ್ರೀಡಾಕೂಟದಲ್ಲಿ ಗೆಲುವು ಸಾಧಿಸಲಿ ಎಂದು ಶುಭ ಹಾರೈಸಿದ್ದಾರೆ.

## ವಕ್ಫ್ ಹೋರಾಟ: ರೊಟ್ಟಿ ಬುತ್ತಿ ನೀಡಿ ಧರಣಿಗೆ ಬೆಂಬಲ

ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ತಾಲೂಕಿನ ಉಕ್ಕಲಿ ಗ್ರಾಮದ ರೈತ ಬಾಂಧವರು ವಿಜಯಪುರ ನಗರದಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರ ನೇತೃತ್ವದಲ್ಲಿ ನಡೆಯುತ್ತಿರುವ ವಕ್ಫ್ ಹಟಾವೋ ದೇಶ ಬಚಾವೋ, ಮಾದಕ ವಕ್ಫಾಯ್ದೆ ರದ್ದುಗೊಳಿಸಬೇಕೆಂದು ಆಗ್ರಹಿಸಿ ನಡೆಯುತ್ತಿರುವ ಧರಣಿ ಸತ್ಯಾಗ್ರಹಕ್ಕೆ ಬುಧವಾರ ರೊಟ್ಟಿ ಬುತ್ತಿ ನೀಡುವ ಮೂಲಕ ಬೆಂಬಲ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ರೈತರಾದ ಅಶೋಕ ಹಾವಿನಾಳ, ಬಾಬುಗೌಡ ಬಿರಾದಾರ, ಅಶೋಕ ಮಸಳಿ, ಜೀವಪ್ಪ ಬಮನಳ್ಳಿ, ಮಲ್ಲೇಸಿ ಜುಮನಾಲ, ಬಸು ಬಡಿಗೇರ, ಶಂಕ್ರಯ್ಯ ಬಬಲೇಶ್ವರ, ಪ್ರಶಾಂತ ಬಡಿಗೇರ, ರಾಹುಲ ಕಲಗೊಂಡ, ಚಿದು ಬೆಲ್ಲದ, ಗೊಲ್ಲಾಳ ನಾದ, ಜಾವು ಮಸಳಿ, ಜಕ್ಕಪ್ಪ ನಾದ, ಮೋಹನ ಬಡಿಗೇರ, ಅಶೋಕ ಹಡಪದ, ಗಂಗಾಧರ ಬಡಿಗೇರ, ಮಹಾಂತೇಶ ಕಂಬಿ, ರಾಜು ಮಸಳಿ, ಪ್ರಜ್ವಲ ಹಂಡಿ, ಜಗು ಬಸರಿಗಿಡದ, ಭೀಮು ಹಡಪದ ಇತರರು ಇದ್ದರು.

### ಕಲಾವಿದ ರಮೇಶ ಚವ್ಹಾಣ ರ "ನನ್ನ ಅಭಿವ್ಯಕ್ತಿ" ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ | ಲಲಿತಕಲಾ ಅಕಾಡೆಮಿ ಅಧ್ಯಕ್ಷ ಪ.ಸ.ಕುಮಾರ್ ಅಭಿಮತ

# ಕಲಾವಿದರು ಸೃಜನಶೀಲರಾಗಿದ್ದರೆ ಸೃಜನಾತ್ಮಕ ಕಲಾಕೃತಿ ರಚನೆ ಸಾಧ್ಯ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕಲಾವಿದರು ಸೃಜನಶೀಲರಾಗಿದ್ದರೆ ಮಾತ್ರ ಅವರಿಂದ ಸೃಜನಾತ್ಮಕ ಕಲಾಕೃತಿ ರಚನೆ ಸಾಧ್ಯ ಎಂದು ಲಲಿತಕಲಾ ಅಕಾಡೆಮಿ ಅಧ್ಯಕ್ಷ ಪ.ಸ.ಕುಮಾರ್ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಸರಕಾರಿ ಆರ್ಟ್ ಗ್ಯಾಲರಿಯಲ್ಲಿ ಬುದವಾರ ಸಂಜೆ ಕ್ಯಾನವಾಸ ಆರ್ಟ್ ಫೌಂಡೇಶನ್ ಆಯೋಜಿಸಿದ ಕಲಾವಿದ ರಮೇಶ ಚವ್ಹಾಣ ಅವರ "ನನ್ನ ಅಭಿವ್ಯಕ್ತಿ" ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ಕಲೆನಿಂತ ನೀರಾಗಬಾರದು. ಕಲಾವಿದ ನಿರಂತರವಾಗಿ ಕೃತಿ ರಚನೆಯಲ್ಲಿ ತೊಡಗಿದರೆ ಅತ್ಯಂತ ಸುಂದರ ಜೀವನ ಅವನದಾಗುತ್ತದೆ. ದೃಶ್ಯ ಕಲಾ ಪ್ರಕಾರಗಳಲ್ಲಿ ಹಲವಾರು ವಿಷಯಗಳಿದ್ದು, ಅದರಲ್ಲೂ ನವ್ಯಕಲೆಯು ಅತ್ಯಂತ ಕಷ್ಟದ



ಕೆಲಸ. ಅದರಲ್ಲಿ ಸಿದ್ಧಹಸ್ತರಾದ ಯುವ ಕಲಾವಿದ ರಮೇಶ ಚವ್ಹಾಣ ತಮ್ಮ ಕೆಲಸದಲ್ಲಿ ಸಾಧನೆ ಮಾಡುತ್ತಿರುವುದು ಶ್ಲಾಘನೀಯ ಎಂದರು. ಪ್ರದರ್ಶನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಲಲಿತಕಲಾ ಅಕಾಡೆಮಿಯ ರಿಜಿಸ್ಟ್ರಾರ್ ಬಿ. ನೀಲಮ್ಮ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ ಬಜಂತ್ರಿ, ಹಿರಿಯ ಕಲಾವಿದರಾದ ಪಿ.ಎಸ್. ಕಡೇಮನಿ, ಎಂ.ಕೆ.ಪತ್ತಾರ, ವಿದ್ಯಾಧರ ಸಾಲಿ, ಬಾಬುರಾವ್ ನಡೋಣಿ, ಸಂಗಣ್ಣ ಪಾಟೀಲ್, ಡಾ ಶಶಿಕಲಾ ಹೂಗಾರ, ಬಿ.ಎಸ್.ಪಾಟೀಲ್, ಓ ವೆಂಕಟೇಶ, ಸವಿತಾ, ಲಿಂಗರಾಜ ಕಾಚಾಪೂರ, ಸಂತೋಷಕುಮಾರ ಎನ್.ಆರ್, ರವೀಶ ಎಚ್. ಎನ್. ರವಿಕುಮಾರ, ಡಿ.ಬಿ, ಅಕಾಡೆಮಿಯ ಸದಸ್ಯೆ ರಾಜೇಶ್ವರಿ ಮೋಪಗಾರ್, ಆಶಾರಾಣಿ. ನಡೋಣಿ, ವೆಂಕಟೇಶ ಬಡಿಗೇರ್, ವಿಶ್ವನಾಥ ಅಗಸರ್, ಶಿವಾನಂದ ಅಥಣಿ, ಛಾಯಾಗ್ರಾಹಕ ಕಲಾವಿದರಾದ ಸತೀಶ ಕಲಾಲ, ಪ್ರಶಾಂತ ಪಟ್ಟಣಶೆಟ್ಟಿ, ರಾಜುಸಿಂಗ್ ರಜಪೂತ, ಕಲಾವಿದ ಪತ್ರಕರ್ತ, ಇಂದುಶೇಖರ ಮಣೂರ ಸಹಿತ ಕಲಾವಿದರು, ಕಲಾಸಕ್ತರು ಉಪಸ್ಥಿತರಿದ್ದರು.

## ವಕ್ಫ ನಿಗಮದ ನೀತಿ ವಿಷಬೀಜ ಬಿತ್ತುವ ಹುನ್ನಾರ :ಗಾಂವಕರ್

ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ನಗರ ಶಾಸಕ ಬಸನಗೌಡ ಯತ್ನಾಳ ಅವರ ನೇತೃತ್ವದಲ್ಲಿ ವಿಜಯ ಪುರದಲ್ಲಿ ನಡೆ ಯುತ್ತಿರುವ ವಕ್ಫ ನಿಗಮದ ನೀತಿಯನ್ನು ವಿರೋಧಿಸಿ ನಡೆಸುತ್ತಿರುವ ಅನಿರ್ದಿಷ್ಟ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಗುರುವಾರ ಬೇಟಿ ನೀಡಿದ ಉತ್ತರ ಕನ್ನಡ ಜಿಲ್ಲೆಯ ಭಾರತೀಯ ಕಿಸಾನ್ ಸಂಘದ ಜಿಲ್ಲಾ ಅಧ್ಯಕ್ಷ ಶಿವರಾಮ್ ಗಾಂವಕರ ಬೆಂಬಲ ಸೂಚಿಸಿದ್ದಾರೆ. ಈ ವೇಳೆ ಮಾತನಾಡಿದ ಅವರು, ವಕ್ಫ ನಿಗಮದ ವಿರುದ್ಧ ಯತ್ನಾಳ ಅವರು ಹೂಡಿದ ಈ ಹೋರಾಟ ಅರ್ಥಪೂರ್ಣವಾದುದು, ಇದಕ್ಕೆ ನಾಡಿನ ಸಮಸ್ತರ ಬೆಂಬಲವಿದೆ. ಇಂತಹ ಕೊಳಕು ನೀತಿಯನ್ನು ಹೋಗ ಲಾಡಿಸಲು ಹೋರಾಟಗಾರರು ಕಸಬರಿ ಗೆಯಂತೆ ಆಗಬೇಕು. ಕೊಳೆ ಉಳಿಯದಂತೆ ಇದನ್ನು ಗುಡಿಸಿದಾಗ ಇದು ಸ್ವಚ್ಛವಾಗುತ್ತದೆ. ಆ ಕಾರ್ಯವನ್ನು ವಿಜಯಪುರದಲ್ಲಿ ಯತ್ನಾಳ ಅವರು ಮಾಡುತ್ತಿದ್ದಾರೆ. ನಮ್ಮದೇಶ ನೆಲ, ಜಲ, ಭೂಮಿಗೆ ತೊಂದರೆ ಕೊಡುವವರನ್ನು ಇಲ್ಲಿಂದ ಓಡಿಸಲು ಮತ್ತೆ ಛಲೇ ಜಾವ್ ಚಳುವಳಿ ನಡೆಸಬೇಕಾಗುತ್ತದೆ. ಈ ಕಾರ್ಯಕ್ಕೆ ನಮ್ಮ ಉತ್ತರ ಕನ್ನಡ ಜಿಲ್ಲೆಯ ಭಾರತೀಯ ಕಿಸಾನ್ ಸಂಘದ ಬೆಂಬಲ ಹೋರಾಟಕ್ಕೆ ಸದಾ ಇರುತ್ತದೆ ಎಂದರು.

### ದೇಶದಲ್ಲಿ ವಕ್ಫ್ ಕಾಯ್ದೆ ಸಂಪೂರ್ಣ ರದ್ದು ಮಾಡಿ ರೈತರನ್ನು ಉಳಿಸಲು ಆಗ್ರಹ

# ಜೆಪಿಸಿ ಅಧ್ಯಕ್ಷ ಜಗದಾಂಬಿಕ ಪಾಲ್ ರಿಗೆ ರೈತ ಸಂಘದಿಂದ ಮನವಿ

ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ವಕ್ಫ್ ಬೋರ್ಡ್ ಕಾಯ್ದೆಯಿಂದ ರೈತರಿಗೆ ಆಗುತ್ತಿರುವ ತೊಂದರೆ ಕುರಿತು ವೀಕ್ಷಿಸಿ ರೈತರು, ಸಾರ್ವಜನಿಕರು, ಸ್ವಾಮೀಜಿಗಳಿಂದ ಮನವಿ ಸ್ವೀಕರಿಸಲು ಆಗಮಿಸಿದ ಜೆಪಿಸಿ ಅಧ್ಯಕ್ಷ ಜಗದಾಂಬಿಕ ಪಾಲ್ ಹಾಗೂ ಸಂಸದ ತೇಜಸ್ವಿ ಸೂರ್ಯ ರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯಿಂದ ಮನವಿ ಸಲ್ಲಿಸಲಾಯಿತು. ಈ ವೇಳೆ ಜಿಲ್ಲಾ ಅಧ್ಯಕ್ಷ ಸಂಗಮೇಶ ಸಗರ ಮಾತನಾಡಿ, ದೇಶದಲ್ಲಿ ವಕ್ಫ್ ಕಾಯ್ದೆ ಸಂಪೂರ್ಣ ರದ್ದು ಮಾಡಿ ದೇಶದ ರೈತರನ್ನು ಉಳಿಸಬೇಕು ಎಂದು ಆಗ್ರಹಿಸಿದರು. ಈಗಾಗಲೇ ವಿಜಯಪುರದಿಂದ ಆರಂಭವಾದ ಈ ಹೋರಾಟ ರಾಜ್ಯದ 31 ಜಿಲ್ಲೆಗಳಲ್ಲಿ ಹಾಗೂ ದೇಶದ ಎಲ್ಲ ರಾಜ್ಯಗಳಲ್ಲಿ ಕೂಡ ಹಬ್ಬಿಕೊಂಡಿದೆ. ಇದು ಹೀಗೆ ಮುಂದುವರೆದರೆ ದೊಡ್ಡಮಟ್ಟದ ರೈತ ಕ್ರಾಂತಿ ಆಗಲಿದೆ ಎಂದು ಎಚ್ಚರಿಸಿದರು. ಈ ವೇಳೆ ರೈತ ಸಂಘದ ಉಪಾಧ್ಯಕ್ಷ ವೀರೇಶ್ ಗೊಬ್ಬುರ್, ಜಿಲ್ಲಾ ಸಂಚಾಲಕ, ರಾಮನಗೌಡ ಪಾಟೀಲ್ ಬ್ಯಾಲ್ಯಾಳ ಹಾಗೂ ರಾಜ್ಯ ಯುವ ಘಟಕದ ಸಂಚಾಲಕ ಸಿದ್ಧನಗೌಡ ಪಾಟೀಲ್ ಸೇರಿದಂತೆ ಹಲವರು ಇದ್ದರು.



"ಅನ್ನದಾತನನ್ನು ಪೂಜ್ಯನೀಯ ಭಾವನೆಯಿಂದ ಕಾಣುವ ದೇಶ ನಮ್ಮದು. ದೇಶದ ಬೆನ್ನೆಲುಬು ಎಂದು ರೈತರನ್ನು ಕರೆಯುತ್ತಾರೆ.ಆತ ಕಷ್ಟಪಟ್ಟು ಬಿತ್ತದೇ ಹೋದರೆ ನಾವು ಹಸಿವೆಯಿಂದ ಅಸುನೀಗಬೇಕಾಗುತ್ತದೆ. ಆದರೆ ಇಂತಹ ರೈತ ಬಾಂಧವರನ್ನು ಸಂಕಷ್ಟಕ್ಕೆ ದೂಡಲು ಕಾಂಗ್ರೆಸ್ ಹವಣಿಸುತ್ತಿದೆ. ಕೇವಲ ಅಲ್ಪಸಂಖ್ಯಾತರ ತುಷ್ಟೀಕರಣಕ್ಕಾಗಿ ಅನ್ನದಾತನ ಜಮೀನನ್ನೇ ಬಲಿ ಕೊಡಲು ಹೊಂಚು ಹಾಕುತ್ತಿರುವ ಕಾಂಗ್ರೆಸ್ ಪಕ್ಷಕ್ಕೆ ಮಾನವೀಯತೆಯೇ ಸತ್ತು ಹೋಗಿದೆ."

- ಉಮೇಶ್ ಕಾರಜೋಳ
ಬಿಜೆಪಿ ಮುಖಂಡರು, ವಿಜಯಪುರ

### ಬಾಗಲಕೋಟ ಜಿಲ್ಲಾ ಹೊನಲು ಬೆಳಕಿನ ಕಬಡ್ಡಿ ಚಾಂಪಿಯನ್ ಟ್ರೋಫಿ | ಮೂವತ್ತೆರಡು ತಂಡಗಳು ಭಾಗಿ | ಕಬಡ್ಡಿ ಪ್ರೇಮಿಗಳಿಗೆ ಭರಪೂರ ಮನರಂಜನೆ

# ಕಬ್ಬಡ್ಡಿ ವೈಭವದಲ್ಲಿ ಮಾರುತೇಶ್ವರ ತಂಡ ಜಿಲ್ಲಾ ಚಾಂಪಿಯನ್

ಉದಯರಶ್ಮಿ ದಿನಪತ್ರಿಕೆ




ಚಿಮ್ಮಡ: ಗ್ರಾಮದಲ್ಲಿ ಕಳೆದ ಎರಡು ದಿನಗಳಿಂದ ನಡೆಯುತ್ತಿದ್ದ ಹೊನಲು ಬೆಳಕಿನ ಬಾಗಲಕೋಟ ಜಿಲ್ಲಾ ಕಬ್ಬಡ್ಡಿ ಚಾಂಪಿಯನ್ ಟ್ರೋಫಿಯು ಈ ಭಾಗದ ಕಬ್ಬಡ್ಡಿ ಪ್ರೇಮಿಗಳಿಗೆ ಭರಪೂರ ಮನರಂಜನೆ ನೀಡಿತು.

ಇಲ್ಲಿನ ಪಿಕೆಪಿಎಸ್ ಆವರಣದಲ್ಲಿ ಓಂ ಪ್ರಭುಲಿಂಗೇಶ್ವರ ಯುವಕರ ಕ್ರೀಡಾ ಸಂಘ ಹಾಗೂ ಬಾಗಲಕೋಟ ಜಿಲ್ಲಾ ಅಮೆಚೂರ್ ಕಬ್ಬಡ್ಡಿ ಅಸೋಶಿಯೇಷನ್ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಪ್ರೋ ಕಬ್ಬಡ್ಡಿ ಮಾದರಿಯ ಪಂದ್ಯಾವಳಿಯಲ್ಲಿ ಭಾಗವಹಿಸಿದ ಮೂವತ್ತೆರಡು ತಂಡಗಳು ಅತ್ಯುತ್ತಮ ಪ್ರದರ್ಶನ ನೀಡುವುದರೊಂದಿಗೆ ನೆರೆದ ಸಾವಿರಾರು ಸಂಖ್ಯೆಯ ಪ್ರೇಕ್ಷಕರನ್ನು ರಂಜಿಸಿದವು. ಬುಧವಾರ ನಡೆದ ಫಿನಾಲೆಯಲ್ಲಿ ಸೊರಗಾವಿಯ ಮಾರುತೇಶ್ವರ ಕಬ್ಬಡ್ಡಿ ತಂಡ ವಿಜಯಶಾಲಿಯಾಗುವುದರೊಂದಿಗೆ ಜಿಲ್ಲಾ ಚಾಂಪಿಯನ್ ಪಟ್ಟ ತನ್ನದಾಗಿಸಿಕೊಂಡಿತು.

ರಾತ್ರಿ ನಡೆದ ಸಮಾರೋಪ ಸಮಾರಂಭದಲ್ಲಿ ಬಹುಮಾನ ಹಾಗೂ ಟ್ರೋಫಿ ವಿತರಣಾ ಕಾರ್ಯಕ್ರಮ ನಡೆಯಿತು.ಸಮಾರಂಭದ ಸಾನಿಧ್ಯವನ್ನು ಬಂಡಿಗಣಿ ನೀಲಮಾನಿಕ ಮಠದ ದಾನೇಶ್ವರ ಶ್ರೀಗಳು ವಹಿಸಿದ್ದರು, ಅಧ್ಯಕ್ಷತೆಯನ್ನು ಹಣಮಂತ ಕೊಣ್ಣೂರ ವಹಿಸಿದ್ದರು ಕಾರ್ಯಕ್ರಮದ ಉದ್ಘಾಟಣೆಯನ್ನು ಬನಹಟ್ಟಿ ಠಾಣಾಧಿಕಾರಿ ಶ್ರೀಮತಿ ಶಾಂತಾ ಹಳ್ಳಿ ನೆರವೇರಿಸಿದರು, ಮುಖ್ಯ ಅತಿಥಿಗಳಾಗಿ ರಾಮಣ್ಣ ಮುಗಳಖೋಡ, ಪುಂಡಲಿಕಪ್ಪಾ ಪೂಜಾರಿ, ಅಣ್ಣಪ್ಪಗೌಡ ಪಾಟೀಲ, ಬಾಳಪ್ಪ ಹಳಿಂಗಳಿ, ಉಮೇಶ ಪೂಜಾರಿ, ಮುತ್ತು ಢವಳೇಶ್ವರ, ಅಶೋಕ ಮೋಟಗಿ, ಮಹಾಲಿಂಗ ಬಳಗಾರ, ಬಾಳಪ್ಪಾ ಗಡೆಪ್ಪನವರ, ರವಿ ಬಗನಾಳ, ಗ್ರಾಮ ಆಡಳಿತ ಅಧಿಕಾರಿ ಮಂಜುನಾಥ ನೀಲನ್ನವರ, ಸದಾಶಿವ ಕುಂಬಾರ, ಅರಭಾಜ ಜಮಖಂಡಿ, ಜಿಲ್ಲಾ ಅಮೇಚೋರ್ ಕಬ್ಬಡ್ಡಿ ಅಸೋಶಿಯೇಷನ್ ಮುಖ್ಯಸ್ಥರು ಸೇರಿದಂತೆ ಹಲವಾರು ಜನ ಪ್ರಮುಖರು ಆಗಮಿಸಿದ್ದರು.

## ದ್ವಿತೀಯ & ತೃತೀಯ ಸ್ಥಾನ ಪಡೆದ ತಂಡಗಳು.

ಬೀಳಗಿ ತಾಲೂಕಿನ ಸೊನ್ನ ಗ್ರಾಮದ ಜೈಸಿದ್ದ ಕಬ್ಬಡ್ಡಿ ತಂಡ ದ್ವಿತೀಯ ಸ್ಥಾನ ಪಡೆದುಕೊಂಡರೆ, ಜಾನಮಟ್ಟಿಯ ಬಸವೇಶ್ವರ ಕಬ್ಬಡ್ಡಿ ತಂಡ ತೃತಿಯ ಸ್ಥಾನ ಪಡೆದುಕೊಂಡಿತು. ಹುನಗುಂದ ನಗರದ ಎಸ್‌ವಿಎಂ ಕಬ್ಬಡ್ಡಿ ತಂಡ ಸಮಾಧಾನಕರ ನಾಲ್ಕನೇ ಬಹುಮಾನಕ್ಕೆ ಅರ್ಹವಾಯಿತು.


### ಶ್ರೀಮಠದ ಪೀಠಾಧಿಪತಿ ಡಾ.ಶಿವಲಿಂಗೇಶ್ವರ ಗುರುಮುರುಗೇಂದ್ರ ಶ್ರೀಗಳಿಂದ ಡಿ ಸಿ ಟಿ.ಭೂಬಾಲನ್ ರಿಗೆ ಮನವಿ ಸಲ್ಲಿಕೆ

# ವಿರಕ್ತಮಠ ಆಸ್ತಿ ಪಹಣಿಯಲ್ಲಿ ವಕ್ಫ್ ಬೋರ್ಡ ಹೆಸರು ತೆರವಿಗೆ ಆಗ್ರಹ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಪಟ್ಟಣದ ವಿರಕ್ತಮಠವು 12ನೇ ಶತಮಾನದ ಬಸವಣ್ಣನವರ ಕಾಲದ ಮಠವಾಗಿದ್ದು, ಇತಿಹಾಸವುಳ್ಳ ಶ್ರೀಮಠದ ಆಸ್ತಿ ಹೊಡೆಯಲು ಕೆಲವರು ಸಂಚು ರೂಪಿಸಿ ಮಠದ ಸರ್ವೆ ನಂ.1020 1ಎಕರೆ 36ಗುಂಟೆ ಜಮೀನ ಪಹಣಿ ಉತಾರಿಯ ಋಣಗಳು ಕಾಲಂ 11ರಲ್ಲಿ 2018-19ನೆಯ ಸಾಲಿನಲ್ಲಿ ಅಕ್ರಮವಾಗಿ ಖಬರಸ್ಥಾನ ಸಿಂದಗಿ (ಸುನ್ನಿ) ವಕ್ಫ ಆಸ್ತಿ ಅಂತ ನಮೂದು ಮಾಡಿದ್ದಾರೆ. ಇದನ್ನು ತೆರವುಗೊಳಿಸಬೇಕು ಎಂದು ಸಿಂದಗಿ ಹಾಗೂ ಸಂಕ ವಿರಕ್ತಮಠದ ಶ್ರೀಮಠದ ಪಿಠಾಧಿಪತಿ ಡಾ.ಶಿವಲಿಂಗೇಶ್ವರ ಗುರುಮುರುಗೇಂದ್ರ ಶ್ರೀಗಳು ಹೇಳಿದರು.

ಸಿಂದಗಿಯ ವಿರಕ್ತಮಠದ ಆಸ್ತಿ ಪಹಣಿಯಲ್ಲಿನ ವಕ್ಫ್ ಬೋರ್ಡ ತೆರವು ಮಾಡಲು ವಿಜಯಪುರದಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರಿಗೆ ಅಗತ್ಯ ಧಾಖಲೆಗಳೊಂದಿಗೆ ಮನವಿ ಸಲ್ಲಿಸಿ, ಶ್ರೀಮಠದ ಇತಿಹಾಸದ ಕುರಿತು ವಿವರಿಸಿದರು. ಹಿನ್ನೆಲೆ: ಸಿಂದಗಿ ವಿರಕ್ತಮಠವು ಮಹಾರಾಷ್ಟ್ರದ ಜತ್ತ ತಾಲೂಕಿನ ಬೀಳೂರು ಶ್ರೀಮಠದ ಮಠವಾಗಿದ್ದು. ಈ ಮಠದ ಅಧಿನದಲ್ಲಿ ಸಿಂದಗಿ ವಿರಕ್ತಮಠ, ಸಂಕ ವಿರಕ್ತಮಠ, ಮುಚ್ಚಂಡಿ ವಿರಕ್ತಮಠ, ಚಿಕ್ಕೋಡಿ ತಾಲೂಕಿನ ಆಡಿ ವಿರಕ್ತಮಠಗಳಿದ್ದು. ಈ ಎಲ್ಲಾ ಮಠಗಳಿಗೂ 600 ವರ್ಷಗಳ ಇತಿಹಾಸದ ದಾಖಲೆಗಳಿವೆ. ಅದರಲ್ಲು ಸಿಂದಗಿ ಮಠದ ಮೊದಲನೇ ಪೀಠಾಧಿಪತಿಗಳು ಪ್ರಸನ್ನೇಶ್ವರ ಶ್ರೀಗಳು, ಎರಡನೇ ಪೀಠಾಧಿಪತಿಗಳು ಚಿರಂತಯ್ಯನವರು, ಮೂರನೇ ಪಿಠಾಧಿಪತಿಗಳು ಷಣ್ಮುಖಯ್ಯನವರು, ನಾಲ್ಕನೇ ಪೀಠಾಧಿಪತಿ ರಾಜಯೋಗಿ ಗುರುಬಸವ ಮಹಾಸ್ವಾಮೀಗಳು ಬೀಳೂರು ಇವರು ನಡೆದಾಡುವ ದೇವರು ಎಂದೇ ಖ್ಯಾತಿಯನ್ನು ಪಡೆದಿದ್ದರು. ಇವರು ನೆರೆಯ ರಾಜ್ಯ ಮಹಾರಾಷ್ಟ ಹಾಗೂ ಕರ್ನಾಟಕದಲ್ಲಿ ಸಾಮಾಜಿಕ, ಧಾರ್ಮಿಕ ಹಾಗೂ ಶೈಕ್ಷಣಿಕ ಸೇವೆ ಮಾಡಿ ಅವಿಸ್ಮರಣೀಯರಾಗಿದ್ದರು. ಇವರು ಶಿಕ್ಷಣ ರಂಗದಲ್ಲಿ ಕ್ರಾಂತಿ ಮಾಡಿದ್ದರು.



ಶಿಕ್ಷಣದ ಬಗ್ಗೆ ಅಪಾರ ಕಾಳಜಿ ಹಾಗೂ ಪ್ರೇಮ ಉಳ್ಳವರಾದ ಶ್ರೀಗಳು ಸಮಾಜದಲ್ಲಿಯ ಅಜ್ಞಾನವನ್ನು ಹೋಗಲಾಡಿಸುವುದಕ್ಕಾಗಿ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಿದರು. ಬೆಳಗಾಂವಿ, ಬಿಜಾಪೂರ, ಜಿಲ್ಲೆಗಳಲ್ಲಿ ಬೃಹತ್ ಮಟ್ಟದ ಶಿಕ್ಷಣ ಸಂಸ್ಥೆಗಳ ಸ್ಥಾಪನೆಗೆ ಪ್ರೇರಣೆ ನೀಡಿದ್ದರು. ಪೂಜ್ಯ ಶ್ರೀಗಳ ಮುಂದಾಲೋಚನೆ, ಚಿಂತನೆಯ ಪರಿಣಾಮವಾಗಿ ಧಾರವಾಡದಲ್ಲಿ ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆ ಹುಟ್ಟಿತ್ತು. ಮತ್ತು ಬೀಳೂರು ಶ್ರೀ ಗುರು ಬಸವಾರ್ಯರು ಬಾಗಲಕೋಟೆಯಲ್ಲಿ ಬಸವೇಶ್ವರ ವಿದ್ಯಾವರ್ಧಕ ಸಂಘವನ್ನು (1906) ರಲ್ಲಿ ಸ್ಥಾಪಿಸಿ ಅದರ ಸಂಸ್ಥಾಪಕ ಅಧ್ಯಕ್ಷರಾಗಿದ್ದರು. ಹೀಗೆ ಹತ್ತು ಹಲವು ಶಿಕ್ಷಣ ಸಂಸ್ಥೆಗಳನ್ನು ತೆಗೆಯುವುದರ ಮುಖಾಂತರ ಪ್ರತಿಯೊಬ್ಬರಿಗೂ ಅಜ್ಞಾನದಿಂದ ಶಿಕ್ಷಣದ ಮಾರ್ಗಕ್ಕೆ ಕರೆದೊಯ್ದರು. 1904ರಲ್ಲಿ ಅಖೀಲ ಭಾರತ ವೀರಶೈವ ಮಹಾಸಭೆಯು ಅಸ್ತಿತ್ವಕ್ಕೆ ಬಂದಿತು. ಇದೇ ಸಂದರ್ಭದಲ್ಲಿ ಶ್ರೀಗಳನ್ನು ಮುಂಬೈ ಕರ್ನಾಟಕ ಲಿಂಗಾಯತ ಸಮಾಜ ಅಧ್ಯಕ್ಷರು ಕೂಡಾ ಆಗಿದ್ದರು. ಇಂತಹ ಮಹನಿಯರು ಪಿಠಾಧಿಪತಿಗಳಾಗಿದ್ದ ಸಿಂದಗಿ ವಿರಕ್ತಮಠದ ಆಸ್ತಿ ನಂ. 1020ರ 1ಎಕರೆ 36 ಗುಂಟೆ ಜಮೀನಿನ ಪಹಣಿಯಲ್ಲಿ ಕಾಲಂ 11 ರಲ್ಲಿ ವಕ್ಫ ಬೋರ್ಡ ಸುನ್ನಿ ಖಬರಸ್ಥಾನ ಅಂತಾ ನಮೂದಗಿದ್ದು ಅದನ್ನೂ ಕೂಡಲೇ ತೆರವುಗೊಳಿಸಲು ಸದರಿ ಸಿಂದಗಿ ಮಠದ ಸುಮಾರು 600 ವರ್ಷಗಳ ಹಳೆಯ ದಾಖಲೆಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಿ ಅವರಿಗೆ ಮಠದ ಇತಿಹಾಸದ ಬಗ್ಗೆ ಮನವರಿಕೆ ಮಾಡಿಕೊಡಲಾಯಿತು ಎಂದು ಶ್ರೀಗಳು ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಸಿಂದಗಿ ವಿರಕ್ತಮಠದ ಭಕ್ತರಾದ ನಿಂಗಣ್ಣ ಪಟ್ಟಣಶೆಟ್ಟಿ ಸೇರಿದಂತೆ ಅನೇಕರಿದ್ದರು.

## ಬೆಳಗಾವಿ ವಿಭಾಗ ಮಟ್ಟಕ್ಕೆ ತಾಂಬಾ ಬಾಲಕಿಯರು ಆಯ್ಕೆ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನ ತಾಂಬಾ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಬಾಲಕಿಯರು ಥ್ರೋಬಾಲ ಬೆಳಗಾವಿ ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದು ಗ್ರಾಮಸ್ಥರು ಹರ್ಷ ವ್ಯಕ್ತ ಪಡಿಸಿದ್ದಾರೆ. ದೇವರ ಹಿಪ್ಪರಗಿ ತಾಲೂಕಿನ ಕೋರವಾರ ಗ್ರಾಮದಲ್ಲಿ ನಡೆದ ಜಿಲ್ಲಾ ಮಟ್ಟದ ಬಾಲಕಿಯರ ಥ್ರೋಬಾಲ ಕ್ರೀಡೆಯಲ್ಲಿ ಬೆಳಗಾವಿ ವಿಭಾಗ ಮಟ್ಟಕ್ಕೆ ಆಯ್ಕೆಗೊಂಡು ತಾಂಬಾ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಗೆ ಕೀರ್ತಿ ತಂದಿದ್ದಾರೆ. ಬಾಲಕಿಯರ ಸಾಧನೆಗೆ ಮುಖೋಪಾಧ್ಯಾಯ ಪಿ.ಕೆ.ಬಿರಾದಾರ, ಎಸ್.ಡಿ.ಎಮ್.ಸಿ ಅಧ್ಯಕ್ಷ ಸಿದಗೊಂಡ ಹಿರೇಕುರಬರ, ಎಸ್.ಡಿ.ಎಮ್.ಸಿ ಸದಸ್ಯರು, ಶಾಲೆಯ ದೈಹಿಕ ಶಿಕ್ಷಕ ಎಚ್.ಕೆ. ಮಾಳಗೊಂಡ, ಸಹಶಿಕ್ಷಕರು, ಗ್ರಾಮಸ್ಥರು ಅಭಿನಂದಿಸಿದರು.

## ಹೆಸರು ಕಾಳು ಖರೀದಿಗೆ ನೋಂದಣಿ ಮಾಡಲು ನ. 18ರ ವರೆಗೆ ವಿಸ್ತರಣೆ: ಡಿ ಸಿ

ಕಲಬುರಗಿ: ಪ್ರಸಕ್ತ 2024-25ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನ ಎಫ್.ಎ.ಕ್ಯೂ ಗುಣಮಟ್ಟದ ಹೆಸರು ಕಾಳು ಖರೀದಿಗೆ ರೈತರು ಹೆಸರು ನೊಂದಾಯಿಸಲು ಸರ್ಕಾರ ನವೆಂಬರ್ 18ರ ವರೆಗೆ ದಿನಾಂಕ ವಿಸ್ತರಿಸಿದೆ ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

### ರೈತರಿಗೆ ಹಣ ಪಾವತಿಯಲ್ಲಿ ವಿಳಂಬ ಮಾಡುವಂತಿಲ್ಲ | ಕಾರ್ಖಾನೆಗಳ ಮೇಲೆ ಕಠಿಣ ಕ್ರಮದ ಎಚ್ಚರಿಕೆ | ಡಿ ಸಿ ಟಿ.ಭೂಬಾಲನ್ ಖಡಕ್ ಸೂಚನೆ

# ಸಕ್ಕರೆ ಕಾರ್ಖಾನೆಗಳು ಕಬ್ಬು ನುರಿಸುವಿಕೆ ಆರಂಭಕ್ಕೆ ಡಿಸಿ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿರುವ ಎಲ್ಲ ಸಕ್ಕರೆ ಕಾರ್ಖಾನೆಗಳು ಪ್ರಸಕ್ತ ಸಾಲಿನ ಹಂಗಾಮಿಗೆ ಸರ್ಕಾರದ ಆದೇಶದಂತೆ ಕಬ್ಬು ನುರಿಸುವ ಕಾರ್ಯ ಆರಂಭಿಸುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದ್ದಾರೆ.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ಸರ್ಕಾರದ ಆದೇಶದಂತೆ ಕಬ್ಬು ನುರಿಸುವ ಕಾರ್ಯ ಆರಂಭಿಸಬೇಕು. ಬಸವೇಶ್ವರ ಸಕ್ಕರೆ ಕಾರ್ಖಾನೆ ಕಬ್ಬು ಒದಗಿಸಿದ ರೈತರಿಗೆ ಬಿಲ್ಲು ಪಾವತಿಯಲ್ಲಿ ವಿಳಂಬ, ನಿಗದಿತ ಪ್ರಮಾಣಕ್ಕಿಂತ ಹೆಚ್ಚಿನ ಕಬ್ಬು ನುರಿಸುವುದು ಸೇರಿದಂತೆ ನಿಯಮಗಳನ್ನು ಉಲ್ಲಂಘಿಸಿರುವುದರಿಂದ ಬಸವೇಶ್ವರ ಸಕ್ಕರೆ ಕಾರ್ಖಾನೆಗೆ ಕಬ್ಬು ನುರಿಸುವುದು ತಡೆಹಿಡಿಯಲಾಗಿದೆ ಎಂದು ತಿಳಿಸಿದ ಅವರು, ಉಳಿದಂತೆ ಎಲ್ಲ ಕಾರ್ಖಾನೆಗಳು ಕಬ್ಬು ನುರಿಸುವ ಕಾರ್ಯ ಆರಂಭಿಸಿ, ಕಬ್ಬು ಒದಗಿಸಿದ ರೈತರಿಗೆ ಯಾವುದೇ ವಿಳಂಬ ಮಾಡದೇ ನಿಗದಿತ 14 ದಿನಗಳೊಳಗಾಗಿ ಬಿಲ್‌ನ್ನು ಪಾವತಿಸಲು ಕ್ರಮ ವಹಿಸುವಂತೆ ಅವರು ಸೂಚನೆ ನೀಡಿದರು.

ಕಬ್ಬು ನುರಿಸುವ ಮೊದಲು ಎಲ್ಲ ಸಕ್ಕರೆ ಕಾರ್ಖಾನೆಗಳು ತೂಕದ ಯಂತ್ರಗಳು ಡಿಜಿಟಲೀಕರಣಗೊಂಡಿರುವ ಕುರಿತು ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು. ಡಿಜಿಟಲೀಕರಣಗೊಳ್ಳದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ನುರಿಸಲು ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ ಅವರು, ಸ್ಯಾಪಿಂಗ್ ಕಾರ್ಯ ಪೂರ್ಣಗೊಂಡಿರಬೇಕು. ಪಕ್ವವಾಗಿರುವ ಕಬ್ಬನ್ನು ಆದ್ಯತೆಯ ಮೇರೆಗೆ ಕಟಾವು ಮಾಡಿ ನುರಿಸಬೇಕು. ಕೆಎಸ್‌ಪಿಸಿಬಿಯಿಂದ ನಿರ್ಧರಿತ ಕಾರ್ಖಾನೆ ನುರಿಸುವ ಸಾಮರ್ಥ್ಯಕ್ಕನುಗುಣವಾಗಿ ಮಾತ್ರ ಕಬ್ಬು ನುರಿಸಬೇಕು. ನಿಗದಿತ ಪ್ರಮಾಣಕ್ಕಿಂತ ಹೆಚ್ಚಿನ ಕಬ್ಬು ನುರಿಸದಂತೆ ಅವರು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಲ್ಲಿ ಬ್ಯಾಂಕ್ ಖಾತೆ ಹೊಂದಿರಬೇಕು. ಈ ಖಾತೆಯಿಂದಲೇ ಸಕ್ಕರೆ, ಮಾರಾಟ ವ್ಯವಹಾರ ನಿರ್ವಹಣೆಯಾಗಬೇಕು.





ಈ ಕುರಿತು ಆಹಾರ ಮತ್ತು ನಾಗರಿಕರ ಸಬರಾಜು ಇಲಾಖೆ ಉಪನಿರ್ದೇಶಕರು ದೃಢೀಕರಣ ಮಾಡುವಂತೆ ತಿಳಿಸಿದರು. ಜಿಲ್ಲೆಯ ಸಕ್ಕರೆ ಕಾರ್ಖಾನೆಗಳಿಗೆ ಉಪವಿಭಾಗಾಧಿಕಾರಿಗಳು, ಆಹಾರ ಮತ್ತು ನಾಗರಿಕರ ಸಬರಾಜು ಇಲಾಖೆ ಉಪನಿರ್ದೇಶಕರು ಕಾಲಕಾಲಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕಬ್ಬು ನುರಿಸುವ ಕಾರ್ಖಾನೆಗಳು ಎಲ್ಲ ನಿಯಮಗಳನು ಪಾಲಿಸುತ್ತಿರುವ ಕುರಿತು ಪರಿಶೀಲನೆ ನಡೆಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ, ಇಂಡಿ ಉಪವಿಭಾಗಾಧಿಕಾರಿ ಆಬೀದ ಗದ್ಯಾಳ, ಆಹಾರ ಮತ್ತು ನಾಗರಿಕರ ಸಬರಾಜು ಇಲಾಖೆ ಉಪನಿರ್ದೇಶಕ ವಿನಯಕುಮಾರ ಪಾಟೀಲ, ಆಹಾರ ಇಲಾಖೆ ಶಿರಸ್ತೇದಾರ ಅಮರೇಶ ತಾಂಡೂರ ಸೇರಿದಂತೆ ವಿವಿಧ ಅಧಿಕಾರಿಗಳು, ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.



"ರೈತರಿಗೆ ಬಿಲ್ ಪಾವತಿಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ನಿಗದಿತ ಅವಧಿಯೊಳಗೆ ಬಿಲ್ ಪಾವತಿಗೆ ಕ್ರಮ ವಹಿಸಬೇಕು. ಸಕ್ಕರೆ ಕಾರ್ಖಾನೆಗಳು ಕಬ್ಬು ಸಾಗಾಣಿಕೆ ವಾಹನ ಚಾಲಕರಿಗೆ ಸೂಕ್ತ ತಿಳುವಳಿಕೆ ಮೂಡಿಸಬೇಕು. ಕಬ್ಬು ಸಾಗಾಣಿಕೆ ಮಾಡುವ ಪ್ರತಿಯೊಂದು ಕಡಕ್ಟರ್-ವಾಹನಗಳಿಗೆ ಕಡ್ಡಾಯವಾಗಿ ರಿಫ್ಲೆಕ್ಟರ್‌ಗಳನ್ನು ಅಳವಡಿಸಬೇಕು. ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು."

■ - ಪ್ರಸನ್ನ ದೇಸಾಯಿ
ವಿಜಯಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

# ಭಯದ ಇನ್ನೊಂದು ಬದಿಯಲ್ಲಿದೆ ಅದೃಷ್ಟ!!

### 'ಜಯ್ ನುಡಿ' (ವ್ಯಕ್ತಿತ್ವ ವಿಕಸನ ಲೇಖನ ಮಾಲಿಕೆ)



■ ಉದಯರಶ್ಮಿ ದಿನಪತ್ರಿಕೆ

ಬದುಕಿನ ಸಪಾಟು ರಸ್ತೆಯಲ್ಲಿ ಎಷ್ಟೇ ವೇಗವಾಗಿ ಚಲಿಸುವ ಮನಸ್ಸಿದ್ದರೂ ಭಯವೆನ್ನುವುದು ಅಡೆತಡೆಯಂತೆ ಅಡ್ಡಗಟ್ಟುತ್ತದೆ. ಅಡೆತಡೆಯೆಂಬ ಏರಿ ದಾಟಿದ ಮೇಲೆಯೇ ಪರಿಮಳ ತುಂಬಿಕೊಂಡ ಜೀವನದ ಕಂಪು ಎಲ್ಲೆಲ್ಲೂ ಹರಡುವುದು. ಒಮ್ಮೆ ಮನದಲ್ಲಿ ಭಯ ಮೂಡಿದರೆ ಸಾಕು ಹದವಾದ ಲಯದಲ್ಲಿ ಸಾಗುತ್ತಿದ್ದ ಬದುಕು ಮುಗ್ಗರಿಸಿದಂತೆ ಆಗುತ್ತದೆ. ಭಯವೆಂಬುದು ಕತ್ತಲಲ್ಲಿ ಕರಿ ಬೆಕ್ಕನ್ನು ಹುಡುಕಿದಂತೆ. ಭಯದ ಭಯಕ್ಕೆ ಸಣ್ಣ ಪುಟ್ಟ ಆಸೆಗಳಿಗೂ ಕಡ್ಡಿ ಗೀರುವ ಪ್ರಸಂಗಗಳು ಬರುತ್ತವೆ. ಭಯವಿಲ್ಲದೇ ಬದುಕಬೇಕೆನ್ನುವ ಹಂಬಲ ಯಾರಿಗಿಲ್ಲ?

**ಭಯದ ಲೋಕ**

ವಿವಿಧ ವಯೋಮಾನದವರಿಗೆ ಭಯದ ಲೋಕಗಳು ಭಿನ್ನ ಭಿನ್ನ. ಇದರರ್ಥ ಭಯ ಎನ್ನುವುದು ಎಲ್ಲ ವಯಸ್ಸಿನಲ್ಲೂ ಇದ್ದದ್ದೇ ಅಂದಂಗಾಯ್ತು. ದಿಢೀರ್ ಹುಟ್ಟಿಕೊಳ್ಳುವ ಭಯ ಒಂದೆಡೆಯಾದರೆ, ಸದ್ದಿಲ್ಲದೇ ಸುಳಿವಿಲ್ಲದೇ ಬಾಲ್ಯದಿಂದಲೂ ಬೆನ್ನು ಹತ್ತಿ ಬಂದ ಭಯ ಮತ್ತೊಂದೆಡೆ. ಹೀಗೆ ಭಯ ಅಟ್ಟಾಡಿಸಿಕೊಂಡು ಹೊರಟರೆ ಮುಂದೆ ಹೇಗೆ ಎನ್ನುವ ತಲೆಬಿಸಿಯಲ್ಲಿ ಕಿರಿ ಕಿರಿ ಉಂಟಾಗುತ್ತದೆ. ಇದರ ಪರಿಣಾಮವಾಗಿ ಮನಸ್ಸು ಇನ್ನಿಲ್ಲದಂತೆ ಹಿಂಡಿ ಹಿಪ್ಪಿಯಾಗಿಸಲು ಶುರುವಿಟ್ಟುಕೊಳ್ಳುತ್ತದೆ. ಭಯದ ಅಟ್ಟಹಾಸದ ಗೋಳನ್ನು ಸ್ವಗತ ಹೇಳಿಕೊಂಡೇ ದಿನ ದೂಡುವುದು ಆಗುತ್ತದೆ. ಭಯದ ಭಯಕ್ಕೆ ಒಣಗಿದ ತರಕಾರಿಯಂತೆ ಸಪ್ಪೆ ಮುಖ ಮಾಡಿಕೊಂಡು ಬದುಕಿನ ಬಂಡಿ ತಳ್ಳಬೇಕಾಗುತ್ತದೆ.

ಭಯ-ಚಿಂತೆ

ಭಯ ಹೀಗೇ ಮುಂದುವರಿದರೆ ಮುಂದೇನಾಗುವುದೋ ಎಂದು ಭವಿಷ್ಯದ ಬಗ್ಗೆ ಚಿಂತಿಸುತ್ತ ಕೈಯಲ್ಲಿರುವ ವರ್ತಮಾನ ಕಳೆದುಕೊಳ್ಳುತ್ತೇವೆ. "ಬದುಕಿನ ಭವಿಷ್ಯವನ್ನು ಊಹಿಸಬಹುದಾಗಿದ್ದರೆ ಅದು ಬದುಕಾಗಿಯೇ ಉಳಿಯದೆ, ಅದರ ಕಂಪೆಲ್ಲ ಅಳಿದು ಹೋಗುತ್ತಿತ್ತು." ಎಂದಿದ್ದಾರೆ ಎಲೀನರ್ ರೂಸ್‌ವೆಲ್ಟ್. ಭಯ ಅಲ್ಪಾವಧಿಯಲ್ಲಿ ಮಾಯವಾದರೆ ತೊಂದರೆಯಿಲ್ಲ. ಅದು ಚಿಂತೆಗೆ ಕಾರಣವಾಗುವ ತೆರದಲ್ಲಿ ಮುಂದುವರಿದರೆ ಜೀವನಕ್ಕೆ ಅಡ್ಡಿಪಡಿಸುವುದು ಖಂಡಿತ. ಚಿಂತೆಯು ಊಟ,ನಿದ್ದೆ, ಮತ್ತು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದು. ಕೇಂದ್ರೀಕರಿಸುವ ಸಾಮರ್ಥ್ಯದ ಮೇಲೂ ಪರಿಣಾಮ ಬೀರಬಹುದು. ಒಟ್ಟಿನಲ್ಲಿ ಜೀವನಾನಂದದಿಂದ ತಡೆಯತ್ತದೆ. ಭಯ ಹಾಗೂ ಚಿಂತೆಯ ಚಕ್ರಗಳನ್ನು ಮುರಿಯಲು ಕಷ್ಟವಾಗಬಹುದು. ಆದರೆ ಅದನ್ನು ತಡೆಯಲು ಸಾಕಷ್ಟು ಮಾರ್ಗಗಳಿವೆ. ಅದರಲ್ಲಿ ಕೆಲವು ಇಲ್ಲಿವೆ. ಮೊದಲ ಹೆಜ್ಜೆ

ಯಾವುದು ನಮ್ಮನ್ನು ಭಯದ ಲೋಕದಲ್ಲಿ ಮುಳುಗಿಸುತ್ತದೆ ಎಂದು ತಿಳಿದುಕೊಳ್ಳುವುದು ಭಯವನ್ನು ನಿವಾರಿ ಸುವ ಮೊದಲ ಹೆಜ್ಜೆ. ಭಯ ವಾದಾಗ ಏನೇ ನಾಗುತ್ತದೆ ಎಂದು ತಿಳಿಯುವುದು ಮುಖ್ಯ. ಹೃದಯ ತುಂಬ ವೇಗವಾಗಿ ಬಡಿದುಕೊಳ್ಳುತ್ತದೆ. ತುಂಬಾ ಬೆವರುತ್ತೇವೆ. ತಲೆ ಸುತ್ತುತ್ತದೆ. ಬಾಯಿ ಒಣಗುತ್ತದೆ. ಬೇರೆ ಯಾವುದರಲ್ಲೂ ಕೇಂದ್ರೀ ಕರಿಸಲು ಕಷ್ಟವಾಗುತ್ತದೆ. ಇದೆಲ್ಲ ಏಕೆ ಸಂಭವಿಸುತ್ತೆಂದರೆ ದೇಹವು ಭಯವನ್ನು ಗ್ರಹಿಸುತ್ತದೆ. ತುರ್ತು ಪರಿಸ್ಥಿತಿಗಾಗಿ ಸಿದ್ಧಪಡಿಸುತ್ತದೆ. ಮೆದುಳಿನ ಭಾವನಾತ್ಮಕ ಭಾಗವು ದೇಹಕ್ಕೆ ಅಪಾಯದ ಸಂಕೇತಗಳನ್ನು ಕಳಿಸುತ್ತಲೇ ಇರುತ್ತದೆ ಎಂಬುದನ್ನು ತಿಳಿದರೆ ದೇಹವು ಬೇರಿಕೆಯಾಗಿ ಗ್ರಹಿಸುವ ವಿಷಯದ ಮೇಲೆ ಕೇಂದ್ರೀ ಕರಿ ಸುವ ಸಾಮರ್ಥ್ಯವನ್ನು ನೀಡುತ್ತದೆ. ಭಯದ ಬಗೆಗಿರುವ ಭಯವನ್ನು ಬಿಟ್ಟು ಹಾಕಲು ಸಹಕರಿಸುತ್ತದೆ.



**ಬದುಕು ಭರವಸೆ**

ಬದುಕು ಭರವಸೆ ಮೇಲೆ ನಿಂತಿದೆ ಅನ್ನುವ ಮಾತು ನೆನಪಾದರೆ ಸಾಕು ರೇಜಿಗೆ ಹುಟ್ಟಿಸಿರುವ ಭಯದ ಟೈರ್ ಪಂಕ್ಚರ್ ಆಗಿ ಮನದ ಅಂಗಳದಲ್ಲಿ ಸ್ವಲ್ಪ ಧೈರ್ಯ ಚಿಗುರಿಕೊಳ್ಳುತ್ತದೆ. "ಧೈರ್ಯ ಎಷ್ಟು ಮುಖ್ಯವೋ ಯಶಸ್ಸಿನ ಹಾದಿಯಲ್ಲಿ ಒತ್ತಡ ಮೂಡಿಸಿ ಕಾರ್ಯ ನಿರ್ವಹಿಸುವಂತೆ ಮಾಡುವ ಭಯವೂ ಅಷ್ಟೇ ಮುಖ್ಯ." ಎನ್ನುವ ಮಾತು ಭಯದ ಮಹತ್ವಕ್ಕೆ ಅಡಿಗೆರೆ ಎಳೆದಂತಿದೆ. ಭಯದ ಸಖ್ಯದ ಕಟು ಮಧುರತೆ ಗೆಲುವಿನ ರುಚಿಕರ ಫಲದ ಅವಿಭಾಜ್ಯ ಅಂಗ ಅನ್ನುವುದು ಅಷೇ ಸತ್ಯ. ಸಮಸ್ಯೆಯಲ್ಲಿ ಮುಖ ತೊಳೆಯುವ ದಿನಗಳಲ್ಲಿ ಕೊಂಚ ಸಹನೀಯಗೊಳಿಸಬಲ್ಲ ಅಮೃತ ಫಲವೇ ಧೈರ್ಯ. ಅದು ಸಾಥ್ ಕೊಟ್ಟರೆ ಜೀವನ ಸಾರ್ಥಕತೆಯ ದಾರಿ ಹಿಡಿಯುತ್ತದೆ. ಧೈರ್ಯವು ಅಂಜಿಕೆ ಇಲ್ಲದಿರುವುದನ್ನು ಸೂಚಿಸುವುದಿಲ್ಲ. ಬದಲಿಗೆ ನಿಮಗೆ ಮುಖ್ಯವಾದ ಗುರಿಯೊಂದರ ಅನ್ವೇಷಣೆಯಲ್ಲಿ ನಿಮ್ಮ ಅಂಜಿಕೆಯನ್ನು ಲೆಕ್ಕಿಸದೇ ಮುನ್ನುಗ್ಗುವ ಛಾತಿಯನ್ನು ಸೂಚಿಸುತ್ತದೆ. ಧೈರ್ಯಶಾಲಿಗಳಾದರೆ ಸಾಕು ಭಯ ಮಾಯ.

**ಸವಾಲುಗಳ ಹೊದಿಕೆ**

ಭಯ ನಿರಂತರವಾಗಿ ಹೊಸ ಹೊಸ ವೈಖರಿಯ, ತರಹೇವಾರಿ ರೀತಿಯಲ್ಲಿ ಕಾಡುವ ಬದುಕಿನ ದಾರಿಯಲ್ಲಿ ಪ್ರತಿ ಮುಂಜಾವು ಹೊಸದು. ಪ್ರತಿ ದಿನವೂ ಹೊಸದು. ಹೊಸ ಹೊಸ ಸವಾಲುಗಳು ಧುತ್ತೆಂದು ಮುಂದೆ ಬಂದು ನಿಲ್ಲುತ್ತವೆ. ಸವಾಲುಗಳು ಒಂದು ರೀತಿಯಲ್ಲಿ ಅವಕಾಶಗಳಿಗೆ ಹೊಸ ಬಾಗಿಲುಗಳು. ಅವು ಮೇಲ್ನೋಟಕ್ಕೆ ಕಾಣುವುದಿಲ್ಲ ಏಕೆಂದರೆ ಅವು ಸವಾಲುಗಳ ಹೊದಿಕೆ ಹೊದ್ದು ಬರುತ್ತವೆ. ಸಮುದ್ರದ ದಂಡೆಯಲ್ಲಿ ಮಕ್ಕಳು ಆಟವಾಡುತ್ತ ತಮ್ಮ ಪುಟ್ಟ ಕೈಗಳಲ್ಲಿ ಮರಳನ್ನು ತುಂಬಿಕೊಂಡು, ತಮ್ಮ ಬೆರಳ ಸಂದುಗಳಿಂದ ಅದನ್ನು ಪೂರ್ಣವಾಗಿ ಕೆಳಕ್ಕೆ ಚೆಲ್ಲುತ್ತಾರೆ. ಪುಟ್ಟ ಮಕ್ಕಳು ಮಾಡಿದ್ದನ್ನೇ ನಾವು ಅವಕಾಶಗಳೊಂದಿಗೆ ಮಾಡುತ್ತೇವೆ. ಭಯ ತೊರೆಯದಿದ್ದರೆ ಎಷ್ಟು ಹಾನಿಗೊಳಗಾಗಬಹುದು ಎಂಬುದನ್ನು ನಿಖರವಾಗಿ ಕಂಡು ಹಿಡಿಯಲು ಸಾಧ್ಯವಿಲ್ಲ. ಆದ್ದರಿಂದ ಭಯದ ದೈಹಿಕ ಮತ್ತು ಮಾನಸಿಕ ಭಾವನೆಗಳಿಂದ ಅತಿಯಾಗಿ ಅನುಭವಿಸುವುದನ್ನು ಬಿಟ್ಟು ಸವಾಲುಗಳ ಹೊದಿಕೆ ತೆರೆದರೆ ಬದುಕು ಬಂಗಾರ.



**ಅದೃಷ್ಟವಿದೆ**

ಭಯವು ಅತ್ಯಂತ ಶಕ್ತಿಯುತ ಭಾವನೆಗಳಲ್ಲಿ ಒಂದಾಗಿದೆ. ಇದು ನಮ್ಮ ಮನಸ್ಸು ಮತ್ತು ದೇಹದ ಮೇಲೆ ಬಲವಾದ ಪರಿಣಾಮವನ್ನು ಬೀರುತ್ತದೆ. ನಮ್ಮ ಉಳಿವಿಗೆ ಪ್ರಮುಖವಾದ ಪ್ರತಿಕ್ರಿಯೆಯಾಗಿದೆ. ಬೆಂಕಿ ಬಿದ್ದರೆ, ದಾಳಿಗೊಳಾದರೆ, ಪರೀಕ್ಷೆಗಳು ಸಮೀಪಿಸಿದರೆ, ಉದ್ಯೋಗ ಸಂದರ್ಶನ, ಸಾರ್ವಜನಿಕ ಭಾಷಣದಂತಹ ಘಟನೆಗಳಲ್ಲಿ ಇದು ಸಾಮಾನ್ಯ. ಸರಳವಾಗಿ ಹೇಳಬೇಕೆಂದರೆ ನಮ್ಮನ್ನು ಒತ್ತಡಕ್ಕೆ ಸಿಲುಕಿಸುವ ಘಟನೆಗಳಿಗೆ ಇದು ನೈಸರ್ಗಿಕ ಪ್ರತಿಕ್ರಿಯೆಯಾಗಿದೆ. ರಾಬಿನ್ ಶರ್ಮಾ ತಮ್ಮ 'ನಿಮ್ಮ ಭಾಗ್ಯವನ್ನು ಅನ್ವೇಷಿಸಿ.' ಎನ್ನುವ ಪುಸ್ತಕದಲ್ಲಿ ಚೆನ್ನಾಗಿ ಹೇಳಿದ್ದಾರೆ "ಭಯದ ಇನ್ನೊಂದು ಬದಿಯಲ್ಲಿ ನಿಮ್ಮ ಅದೃಷ್ಟವನ್ನು ಕಂಡುಕೊಳ್ಳುತ್ತೀರಿ."ನಿಜಕ್ಕೂ ಅವರ ಮಾತು ಸ್ಫೂರ್ತಿದಾಯಕ. ಅಂದ್ಹಾಗೆ ಸಿದ್ಧತೆಯು ಅವಕಾಶವನ್ನು ಭೇಟಿಯಾಗುವುದೇ ಅದೃಷ್ಟ. ಅವರ ನುಡಿಮುತ್ತು ಭಯಪ್ರಿಯರಿಗೆ ಇಷ್ಟವಾಗುವಂತಿದೆ. ಭಯವಿಲ್ಲದ ಅದೃಷ್ಟದ ದಿನಗಳಿಗಾಗಿ ಕಾಂಯ್ದು ಕುಳಿತುಕೊಳ್ಳುವುದು ಮೂರ್ಖತನ. "ಕಾದಿರುವವರಿಗೆ ಒಳ್ಳೆಯದೇ ದೊರೆಯಬಹುದು ಆದರೆ ಅದು ಲವಲವಿಕೆಯಿಂದ ಕೆಲಸ ಮಾಡಿದಾತ ಬಿಟ್ಟು ಹೋದದ್ದು ಮಾತ್ರವಾಗಿರುತ್ತದೆ." ಇದು ಅಬ್ರಹಾಂಲಿಂಕನ್‌ವರನುಡಿ. ಲವಲವಿಕೆಯಿಂದ ಕೆಲಸ ನಿರ್ವಹಿಸಿ, ಭಯದ ಇನ್ನೊಂದು ಬದಿಯಲ್ಲಿದೆ ಅದೃಷ್ಟವೆನ್ನುತ್ತ ಎರಡು ತೋಳುಗಳನ್ನು ಚಾಚಿ ಅದೃಷ್ಟವನ್ನು ಬಾಚಿಕೊಳ್ಳೋಣವಲ್ಲವೇ?

ಲೇಖನ
– ಜಯಶ್ರೀ .ಜೆ. ಅಬ್ಬಿಗೇರಿ.
ಇಂಗ್ಲೀಷ್ ಉಪನ್ಯಾಸಕರು,
ಬೆಳಗಾವಿ ಮೊ: 9449234142

# ಮಹಿಳಾ ವಿವಿ: ಗ್ರಾಫಿಕ್ ಡಿಸೈನಿಂಗ್ ಸರ್ಟಿಫಿಕೇಟ್ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಗ್ರಾಫಿಕ್ ಡಿಸೈನಿಂಗ್ ಕೋರ್ಸ್ಗೆ ಪ್ರವೇಶ ಪಡೆದುಕೊಳ್ಳಲು ನವೆಂಬರ್ 15ರ ವರೆಗೆ ಅವಕಾಶ ಕಲ್ಪಿಸಲಾಗಿದ್ದು ಆಸಕ್ತ ವಿದ್ಯಾರ್ಥಿನಿಯರು ನೇರವಾಗಿ ವಿಭಾಗದ ಮುಖ್ಯಸ್ಥರನ್ನು ಭೇಟಿ ಮಾಡಿ ಪ್ರವೇಶ ಪಡೆದುಕೊಳ್ಳಬಹುದಾಗಿದೆ. ಆರು ತಿಂಗಳ ಈ ಕೋರ್ಸ್ಗೆ ಪ್ರವೇಶ ಪಡೆದುಕೊಳ್ಳಲು ಪಿಯುಸಿ ಪಾಸಾಗಿರಬೇಕು. ಆರು ತಿಂಗಳ ಈ ಕೋರ್ಸ್ನಲ್ಲಿ ವಿದ್ಯಾರ್ಥಿನಿಯರಿಗೆ ಗ್ರಾಫಿಕ್ ವಿನ್ಯಾಸ ಮತ್ತು ವಿನ್ಯಾಸದ ಅಂಶಗಳ ಬಗ್ಗೆ ತರಬೇತಿ ನೀಡಲಾಗುವುದು. ಅಲ್ಲದೇ ವಿವಿಧ ಗ್ರಾಫಿಕ್ ವಿನ್ಯಾಸದ ಸಾಫ್ಟ್ವೇರ್‌ಗಳನ್ನು ಪರಿಚಯಿಸುವುದು ಮತ್ತು ವೈವಿಧ್ಯಮಯ ಮುದ್ರಣ ವಿನ್ಯಾಸಗಳನ್ನು ರಚಿಸುವಲ್ಲಿ ಪ್ರಾಯೋಗಿಕ ಅನುಭವವನ್ನು ಒದಗಿಸುವುದು ಹಾಗೂ ವಿಭಾಗದಲ್ಲಿ ಲಭ್ಯವಿರುವ ಮಾಧ್ಯಮ ತಂತ್ರಜ್ಞಾನಗಳನ್ನು ವಿದ್ಯಾರ್ಥಿಗಳಿಗೆ ತಲುಪಿಸುವುದು ಈ ಕೋರ್ಸ್ನ ಉದ್ದೇಶವಾಗಿದೆ. ಈ ಸರ್ಟಿಫಿಕೇಟ್ ಕೋರ್ಸ್ನಲ್ಲಿ ವಿದ್ಯಾರ್ಥಿನಿಯ–ರಿಗೆ ಗ್ರಾಫಿಕ್ಸ್ ವಿನ್ಯಾಸದ ಮೂಲ ತತ್ವಗಳು, ಗ್ರಾಫಿಕ್ಸ್ ವಿನ್ಯಾಸ ಮಾಡಲು ಅಗತ್ಯವಿರುವ ಕಂಪ್ಯೂಟರ್ ಜ್ಞಾನ, ಗ್ರಾಫಿಕ್ಸ್ ವಿನ್ಯಾಸಕ್ಕೆ ಬಳಸುವ ಸಾಫ್ಟ್ವೇರ್‌ಗಳ ಪರಿಚಯ, ಗ್ರಾಫಿಕ್ಸ್ ವಿನ್ಯಾಸದ ಪ್ರಕ್ರಿಯೆ, ತಂತ್ರಗಳು, ಬಣ್ಣಗಳ ಬಳಕೆ, ಅಕ್ಷರ ವಿನ್ಯಾಸ, ಚಿತ್ರ ಸಂಯೋಜನೆ, ಮೊದಲಾದ ಅಗತ್ಯ ವಿಷಯಗಳನ್ನು ಕಲಿಸಲಾಗುವುದು. ಈ ಕೋರ್ಸ್ ಪ್ರಾಯೋಗಿಕ ತರಗತಿಗಳನ್ನು ಒಳಗೊಂಡಿರುತ್ತದೆ. ಹೀಗಾಗಿ ಈ ಸರ್ಟಿಫಿಕೇಟ್ ಕೋರ್ಸ್ ಮುಗಿಸಿದವರಿಗೆ ಮುದ್ರಣ ಕ್ಷೇತ್ರದಲ್ಲಿ ಹಲವಾರು ಉದ್ಯೋಗಾವಕಾಶಗಳು ಲಭ್ಯವಿರುತ್ತವೆ. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 9482248372 ಅಥವಾ 9844681398 ಸಂಪರ್ಕಿಸಬಹುದಾಗಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ.

# ಜಿಲ್ಲಾ ಅಧ್ಯಕ್ಷರಾಗಿ ಬಾಗೇವಾಡಿ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕರ್ನಾಟಕ ಗಡಿ ಹೋರಾಟ ಸಮಿತಿ, ಬೆಂಗಳೂರು, ಈ ಸಮಿತಿಗೆ ವಿಜಯಪುರ ಜಿಲ್ಲಾ ಧ್ಯಕ್ಷರಾಗಿ ಬಸವರಾಜ ನಂ ಬಾಗೇವಾಡಿ, ಸಾ, ಉತ್ನಾಳ ಇವರನ್ನು ಆಯ್ಕೆ ಮಾಡಲಾಗಿದೆಯಂದು ಸಂಸ್ಥಾಪಕ ರಾಜ್ಯ ಅಧ್ಯಕ್ಷ ಪ್ರೊ.ಬಿ, ಕೆ,ರಾ, ರಾವ್ ಬೈಂದೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ನೈತಿಕತೆ ಬೋಧಿಸುವ ಶ್ರೇಷ್ಠ ಗ್ರಂಥ ಭಗವದ್ಗೀತೆ :ಉಮೇಶ ಕಾರಜೋಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಶ್ರೀ ಸರ್ವಜ್ಞೇಂದ್ರ ಸರಸ್ವತಿ ಪ್ರತಿಷ್ಠಾನದ ಸಹಯೋಗದಲ್ಲಿ ನಡೆಯುತ್ತಿರುವ ಭಗವದ್ಗೀತಾ ಅಭಿಯಾನದ ಹಿನ್ನೆಲೆಯಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳಿಗೆ 1 ಸಾವಿರಕ್ಕೂ ಹೆಚ್ಚು ಭಗವದ್ಗೀತೆಯ ಪ್ರತಿಗಳನ್ನು ಉಚಿತವಾಗಿ ವಿತರಿಸಲಾಯಿತು. ಈ ವೇಳೆ ಅಭಿಯಾನದ ಕಾರ್ಯಾಧ್ಯಕ್ಷ ಉಮೇಶ ಕಾರಜೋಳ ಮಾತನಾಡಿ, ಭಗವದ್ಗೀತೆ ಮನುಷ್ಯನಿಗೆ ನೈತಿಕತೆ ಬೋಧಿಸುವ ದಿವ್ಯ ಗ್ರಂಥ. ಗೀತಾ ಸಾರವನ್ನು ತಿಳಿದುಕೊಂಡು ಬದುಕಿದರೆ ಇಡೀ ಬದುಕೇ ಧನ್ಯವಾಗುತ್ತದೆ. ಇಡೀ ಬದುಕಿನ ನಿಜಾರ್ಥವೇ ಭಗವದ್ಗೀತೆಯಲ್ಲಿ ಅಡಗಿದೆ. ಮಕ್ಕಳು ಬಾಲ್ಯದಲ್ಲಿಯೇ ಭಗವದ್ಗೀತೆಯ ತತ್ವಗಳನ್ನು ಅಳವಡಿಸಿಕೊಳ್ಳಲು ನೆರವಾಗಲು ಈ ಅಭಿಯಾನ ಸಂಘಟಿಸಲಾಗುತ್ತಿದೆ, ಮಕ್ಕಳು ಭಗವದ್ಗೀತೆಯನ್ನು ಓದುವ ಪರಿಪಾಠ ಅದರಲ್ಲಿರುವ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸುಂದರ ಜೀವನ ಹಾಗೂ ಭವಿಷ್ಯ ರೂಪಿಸಿಕೊಳ್ಳಬೇಕಿದೆ ಎಂದರು. ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಪ್ರಧಾನ ಆಯುಕ್ತ ಸಿದ್ಧಣ್ಣ ಸಕ್ರಿ, ಸಹಜಾನಂದ ದಂದರಗಿ, ಜಿಲ್ಲಾ ಯುವ ಪರಿಷತ್ ಜಿಲ್ಲಾಧ್ಯಕ್ಷ ಶರಣು ಸಬರದ, ರಾಜೇಶ್ವರಿ ಮೋಪಗಾರ,ಪರಸುರಾಮ ಕುಂಭಾರ, ಎಸ್ ಎಸ್ ಬೊಮ್ಮನಹಳ್ಳಿ, ವಿದ್ಯಾವತಿ ಅಂಕಲಗಿ, ರಾಜಶೇಖರ ಖೇಡಗಿ, ವಿನೋದ ಮಣೂರ, ವಿರೇಶ ಗೊಬ್ಬೂರ ಮೊದಲಾದವರಿದ್ದರು.

# ಮುದ್ದೇಬಿಹಾಳದಲ್ಲಿ ನೋಟರಿಗಳ ದಿನಾಚರಣೆ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಪಟ್ಟಣದ ನ್ಯಾಯಾಲಯದಲ್ಲಿ ಗುರುವಾರ ನೋಟರಿಗಳ ದಿನಾಚರಣೆಯನ್ನು ಕೇಕ್ ಕತ್ತರಿಸುವ ಮೂಲಕ ಆಚರಿಸಲಾಯಿತು. ಈ ವೇಳೆ ನೋಟರಿಗಳಾದ ಎಂ.ಎ.ಮುದ್ದೇಬಿಹಾಳ, ಆರ್.ಬಿ.ಪಾಟೀಲ, ಎಸ್.ಎಸ್.ಮಾಲಗತ್ತಿ, ಎಲ್.ಎಸ್.ಮೇಟಿ, ಬಿ.ಎ.ನಾಡಗೌಡರ, ಎಸ್.ಎಚ್.ಲೊಟಗೇರಿ, ಹಿರಿಯ ವಕೀಲರುಗಳಾದ ಜೆ.ಎ.ಚಿನಿವಾರ, ಎಂ.ಎಚ್.ಹಾಲಣ್ಣವರ, ಬಿ.ಆರ್.ನಾಡಗೌರ, ಬಿ.ಎಸ್.ಬಿದರಕುಂದಿ, ಎಂ.ಎಚ್.ಕ್ವಾರಿ ನ್ಯಾಯವಾದಿಗಳಾದ ಎನ್.ಜಿ.ಕುಲಕರ್ಣಿ, ಚೇತನ ಶಿವಶಿಂಪಿ, ಎಸ್.ಬಿ.ಬಾಚಿಹಾಳ, ಬಿ.ವಾಯ್.ಮೇಟಿ ಸೇರಿದಂತೆ ಮತ್ತೀತರರು ಇದ್ದರು.

# ಬಿಜೆಪಿಯ ವಕ್ಫ್ ಹೋರಾಟ ಹಾಸ್ಯಾಸ್ಪದ :ರಾಜು ಆಲಗೂರ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಭಾರತೀಯ ಜನತಾ ಪಕ್ಷವು ತನ್ನ ಚುನಾವಣೆ ಪ್ರಣಾಳಿಕೆಯಲ್ಲಿ ವಕ್ಫ್ ಆಸ್ತಿ ಸಂರಕ್ಷಣೆ ಮಾಡುವುದಾಗಿ ಹೇಳಿತ್ತು. ಆದರೆ, ಈಗ ಆ ಪಕ್ಷದ ಮುಖಂಡರು ವಕ್ಫ್ ಹೋರಾಟ ನಡೆಸುತ್ತಿರುವುದು ಹಾಸ್ಯಾಸ್ಪದ ಎಂದು ಮಾಜಿ ಶಾಸಕ ಪ್ರೊ. ರಾಜು ಆಲಗೂರ ವಾಗ್ದಾಳಿ ನಡೆಸಿದ್ದಾರೆ.ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ವಕ್ಫ್ ಆಸ್ತಿ ಸಂರಕ್ಷಣೆಗೆ ಸಂಬಂಧಿಸಿದಂತೆ ಸಂಸತ್ತಿನಲ್ಲಿ ಪ್ರಶ್ನೆ ಮಾಡಿರುವ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಈಗ ವಕ್ಫ್ ಹೋರಾಟದಲ್ಲಿ ಭಾಗಿಯಾಗುವ ಯಾವ ನೈತಿಕತೆಯೂ ಇಲ್ಲ. ವಕ್ಫ್ ಆಸ್ತಿ ಸಂರಕ್ಷಣೆ ಮತ್ತು ಅತಿಕ್ರಮಣ ತೆರವು ಸೇರಿದಂತೆ ಅನೇಕ ರೀತಿಯಲ್ಲಿ ವಕ್ಫ್ ಗೆ ಪೂರಕವಾಗಿ ಶೋಭಾ ಕರಂದ್ಲಾಜೆ ಅವರು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರ ಇಲಾಖೆಯ ಸಚಿವರಿಗೆ ಪ್ರಶ್ನೆಗಳನ್ನು ಕೇಳಿದ್ದರು. ಈಗ ವಕ್ಫ್ ಕಾಯಿದೆ ರದ್ದುಗೊಳಿಸುವ ಹೋರಾಟದಲ್ಲಿ ಭಾಗಿಯಾಗಿರುವುದು ಅವರಿಗೆ ಶೋಭೆ ತರುವ ವಿಷಯವಲ್ಲ ಎಂದು ಹೇಳಿದರು. ರೈತರ ಜಮೀನು ಯಾವ ಕಾರಣಕ್ಕೂ ವಕ್ಫ ಗೆ ಹೋಗಲು ಬಿಡುವುದಿಲ್ಲ ಎಂದು ನಾವು ಸಹ ಬದ್ಧತೆ ಪ್ರದರ್ಶಿಸುತ್ತೇವೆ. ವಕ್ಫ್ ವಿಚಾರವಾಗಿ ಜಿಲ್ಲೆಯಲ್ಲಿ ಕಾಂಗ್ರೆಸ್ ವಿರುದ್ಧ ಅಪಪ್ರಚಾರ ನಡೆಯುತ್ತಿದೆ. ಜಿಲ್ಲಾ ಮಂತ್ರಿಗಳು ಸ್ಪಷ್ಟನೆ ಕೊಟ್ಟರೂ ಸುಮ್ಮನೆ ಆರೋಪ ಮಾಡಲಾಗುತ್ತಿದೆ. ಸಿಎಂ ಹಿಂದುಳಿದ ಸಮುದಾಯಕ್ಕೆಸೇರಿದ್ದಾರೆಎಂಬ ಕಾರಣಕ್ಕೆ ಹೀಗೆ ಮಾಡುತ್ತಿದ್ದಾರೆ. ಸಂಸದ ರಮೇಶ ಜಿಗಜಿಣಗಿ ಅವರು ರೈತರ ಪರ, ದಲಿತರ ಪರ, ಮಹಿಳೆಯರ ಅನ್ಯಾಯದ ಬಗ್ಗೆ ನಿಂತು ಹೋರಾಟ ಮಾಡಿದ ಉದಾಹರಣೆ ಇಲ್ಲ. ನಿನ್ನೆ ಅವರು ಭಾಗವಹಿಸಿ ವಕ್ಫ್ ರದ್ದಾಗಬೇಕು ಎಂದು ಭಾಷಣ ಮಾಡಿದ್ದಾರೆ. 2024ರಲ್ಲಿ ಕೇಂದ್ರದ ಬಿಜೆಪಿ ಪ್ರಣಾಳಿಕೆಯಲ್ಲಿ ಏನಿತ್ತು? ಅವಲೋಕನ ಮಾಡಿಕೊಳ್ಳಿ. ವಕ್ಫ್ ಆಸ್ತಿಯನ್ನು ಕಾನೂನು ಬಾಹಿರವಾಗಿ ಒತ್ತುವರಿ ಮಾಡಿದ್ದರೆ ತೆರವು ಮಾಡುತ್ತೇವೆ ಎಂದು ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದ್ದಾರೆ. ತಮ್ಮ ಪ್ರಣಾಳಿಕೆಯನ್ನು ಅವಲೋಕಿಸಿ, ವಿಮರ್ಶೆ ಮಾಡಿಕೊಳ್ಳಬೇಕು. ನಾವ್ಯಾರು ರೈತರ, ಕೃಷಿ ಜಮೀನು ಸ್ವಾಧೀನಪಡಿಸಿಕೊಳ್ಳಬಾರದು ಎಂಬ ನಿಲುವಿಗೆ ಕಾಂಗ್ರೆಸ್ ಬದ್ಧವಾಗಿದೆ ಎಂದು ಪ್ರೊ. ರಾಜು ಆಲಗೂರ ಹೇಳಿದರು.

ಈ ಸಂದರ್ಭದಲ್ಲಿ ಉಪಮೇಯರ್ ದಿನೇಶ ಹಳ್ಳಿ, ಕಾಂಗ್ರೆಸ್ ಉಪಾಧ್ಯಕ್ಷ ಡಾ. ಗಂಗಾಧರ ಸಂಬಣ್ಣಿ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ವಿದ್ಯಾರಾಣಿ ತುಂಗಳ, ವಿಡಿಎ ಮಾಜಿ ಅಧ್ಯಕ್ಷ ಚಂದ್ರಕಾಂತ ಶೆಟ್ಟಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸನ್ನಿ ಎಸ್. ಗವಿಮಠ, ವಸಂತ ಹೊನವೋಡೆ ಮುಂತಾದವರು ಉಪಸ್ಥಿತರಿದ್ದರು.

## ಮತದಾರ ಪಟ್ಟಿ ಪರಿಷ್ಕರಣೆ: ನಾಲ್ಕು ದಿನಗಳ ಕಾಲ ವಿಶೇಷ ಅಭಿಯಾನ

# ಅಭಿಯಾನದ ಸದುಪಯೋಗ ಪಡೆದುಕೊಳ್ಳಿ: ಡಿಸಿ ಟಿ.ಭೂಬಾಲನ್

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಅಂಗವಾಗಿ ಮತದಾರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ, ವರ್ಗಾವಣೆ, ಹೆಸರು ತೆಗೆದು ಹಾಕುವ ಕುರಿತು ನವೆಂಬರ್ 9,10 ಹಾಗೂ 23 ಮತ್ತು 24 ರಂದು ಬೆಳಿಗ್ಗೆ 10 ರಿಂದ ಸಂಜೆ 5–30ಗಂಟೆಯವರೆಗೆ ಜಿಲ್ಲೆಯಲ್ಲಿ ನಾಲ್ಕು ದಿನಗಳ ಕಾಲ ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ವಿಶೇಷ ಅಭಿಯಾನ ದಿನಗಳಂದು ಎಲ್ಲ ಬಿಎಲ್‌ಓಗಳು ತಮ್ಮ ಮತಗಟ್ಟೆಗಳಲ್ಲಿ ಉಪಸ್ಥಿತರಿದ್ದು ಸಾರ್ವಜನಿಕರಿಗೆ ಅಗತ್ಯ ನೆರವು ಒದಗಿಸಲಿದ್ದಾರೆ. ವಿಶೇಷ ಅಭಿಯಾನ ದಿನಗಳಂದು ಸಾರ್ವಜನಿಕರು ಮತದಾರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆ, ತಿದ್ದುಪಡಿ, ವಗಾವಣೆ, ಹೆಸರು ತೆಗೆದು ಹಾಕುವುದು ಸೇರಿದಂತೆ ಈ ವಿಶೇಷ ಅಭಿಯಾನದ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮಕ್ಕಳ ಮಾರಾಟ ಶಿಕ್ಷಾರ್ಹ ಅಪರಾಧ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಕ್ಕಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಮಕ್ಕಳನ್ನು ಮಾರುವ ಹಾಗೂ ಕೊಳ್ಳುವವ–ರಿಗೆ ಬಾಲನ್ಯಾಯ ಕಾಯ್ದೆ–2015 ರ ಸೆಕ್ಷನ್ 80 ಮತ್ತು 81ರನ್ವಯ 05 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ 01 ಲಕ್ಷ ರೂಗಳ ದಂಡ ವಿಧಿಸಬಹುದಾಗಿದೆ. ಇಂತಹ ಅಪರಾಧಗಳಲ್ಲಿ ಆಸ್ಪತ್ರೆಯವರು ಶಾಮೀಲಾಗಿದ್ದರೆ ಶಿಕ್ಷೆಯ ಅವಧಿ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆ ಮಾಡಬಹುದಾಗಿದೆ. 2024ರ ನವೆಂಬರ್ ತಿಂಗಳನ್ನು ಅಂತರಾಷ್ಟ್ರೀಯ ದತ್ತು ಮಾಸಾಚರಣೆಯಾಗಿ ಆಚ–ರಿಸಲಾಗುತ್ತಿದೆ. ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ವಿಜಯಪುರ ಇವರ ವತಿಯಿಂದ ಮಕ್ಕಳ ಮಾರಾಟ ಅಪರಾಧದ ಕು–ರಿತು ಜಾಗೃತಿ ಮೂಡಿಸಲಾಗುತ್ತಿದೆ. ಅನಾಥ, ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿಯು ಕಂಡುಬಂದಲ್ಲಿ ಸಾರ್ವಜನಿಕರು ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ವಿಜಯಪುರ ದೂರವಾಣಿ ಸಂಖ್ಯೆ: 08352295261 ಸಂಪರ್ಕಿಸಿ ಮಾಹಿತಿ ನೀಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪ್ರೆಂಟಿಶಿಪ್ ತರಬೇತಿಗೆ ಪರಿಶಿಷ್ಟ ಜಾತಿ–ಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಕರೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿಯ ವಿಶೇಷ ಘಟಕ ಹಾಗೂ ಗಿರಿಜನ ಉಪಯೋಜನೆಯಡಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪಡೆದ ಹಾಗೂ ಕಂಪ್ಯೂಟ–ರ್ ಜ್ಞಾನಹೊಂದಿದ ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ 12 ತಿಂಗಳ ಅಪ್ರೆಂಟಿಶಿಪ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ವಿಜಯಪುರ ಜಿಲ್ಲಾ ಕಚೇ–ರಿಯಲ್ಲಿ ತಲಾ ಒಂದು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದ್ದು, ತರಬೇತಿಗೆ ಮೆರಿಟ್ ಹಾಗೂ ಸಂದರ್ಶನ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಧ್ಯಮ ಅಕಾಡೆಮಿ ಮೂಲಕ ತರಬೇತಿ ಭತ್ಯೆ ನೀಡಲಾಗುವುದು.

ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಬಯಸುವ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿದ ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 30–11–2024ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರ ಆವರಣ, ಸ್ಟೇಶನ್ ರಸ್ತೆ, ವಿಜಯಪುರ ಕಚೇರಿಗೆ ಸಲ್ಲಿಸಬೇಕು. ನಿಗದಿತ ಅರ್ಜಿ ನಮೂನೆ ಹಾಗೂ ಈ ಕು–ರಿತಂತೆ ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇ–ರಿಯನ್ನು ಸಂಪರ್ಕಿಸುವಂತೆ ಸಹಾಯಕ ನಿರ್ದೇಶಕ ಅಮರೇಶ ದೊಡಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





## ಸಿಂದಗಿ & ದೇವರಹಿಪ್ಪರಗಿ ತಾಲೂಕಿನ ಶಾಲೆ-ಹಾಸ್ಟೆಲ್ ಗಳಿಗೆ ಭೇಟಿ । ಮಕ್ಕಳೊಂದಿಗೆ ಸಂವಾದ । ಆತ್ಮವಿಶ್ವಾಸ ಮೂಡಿಸುವಿಕೆ

# ಶಾಲೆ-ಹಾಸ್ಟೆಲ್ ಪರಿಸರದ ಸ್ವಚ್ಛತೆ ಕಾಪಾಡದಿದ್ದರೆ ಕ್ರಮ :ಬಬಲೇಶ್ವರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಶಾಲೆ, ಅಂಗನವಾಡಿಗಳು ಹಾಗೂ ವಸತಿ ನಿಲಯಗಳ ಸುತ್ತಮುತ್ತಲಿನ ಪರಿಸರದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಿ, ಮಕ್ಕಳಿಗೆ ಗುಣಮಟ್ಟದ ಆಹಾರವನ್ನು ನೀಡಿ, ಒಂದು ವೇಳೆ ಗುತ್ತಿಗೆದಾರರು ಕಳಪೆ ಮಟ್ಟದ ಆಹಾರ ಪೂರೈಸಿದರೆ ನಮ್ಮ ಕಾರ್ಯಾಲಯಕ್ಕೆ ಮಾಹಿತಿ ನೀಡಿ, ಅಂತಹ ಆಹಾರ ಪೂರೈಸಿದ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಹೇಳಿದರು.

ಸಿಂದಗಿ ಹಾಗೂ ದೇವರಹಿಪ್ಪರಗಿ ತಾಲೂಕು ವ್ಯಾಪ್ತಿಯ ವಸತಿ ನಿಲಯ ಅಂಗನವಾಡಿ, ಹಾಗೂ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿಯ ವ್ಯವಸ್ಥೆಯನ್ನು ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು.

ತಿಳಗೋಳ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದ ಅವರು, ದೇವರ ಹಿಪ್ಪರಗಿಯಲ್ಲಿರುವ ಮೊರಾರ್ಜಿ ವಸತಿ ಶಾಲೆಗೆ ಭೇಟಿ ನೀಡಿ ಅಲ್ಲಿಯ ವ್ಯವಸ್ಥೆಯನ್ನು ಪರಿಶೀಲನೆ ನಡೆಸಿದ ನಂತರ ಎಸ್ ಎಸ್ ಎಲ್ ಸಿ ಮಕ್ಕಳೊಂದಿಗೆ ಸಂವಾದ ನಡೆಸಿದರು.

ಭಯ ಮುಕ್ತವಾಗಿ ಪರೀಕ್ಷೆ ಎದುರಿಸುವುದು ಹೇಗೆ ಎನ್ನುವ ಕುರಿತು ಮಾತನಾಡಿದ ಅವರು, ಮಕ್ಕಳಲ್ಲಿ ಆತ್ಮವಿಶ್ವಾಸ ಮೂಡಿಸಿದರು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ವಿಶೇಷ ತರಗತಿಗಳನ್ನು ನಡೆಸಿ ಫಲಿತಾಂಶದಲ್ಲಿ ಸುಧಾರಣೆ ಕಂಡುಕೊಳ್ಳುವಂತೆ ಸೂಚನೆ ನೀಡಿದರು.

ತಾಲೂಕಾ ಶಿಶು ಅಭಿವೃದ್ಧಿ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ ಅಧಿಕಾ–ರಿಗಳು, ತಾಲೂಕ ಪಂಚಾಯಿತಿ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಓದುವ ಮಕ್ಕಳು । ಸಚಿವ ಡಾ ಹೆಚ್.ಸಿ.ಮಹದೇವಪ್ಪ ಘೋಷಣೆ

# ವಿದ್ಯಾರ್ಥಿಗಳ ಪ್ರೋತ್ಸಾಹ ಧನ 1 ರಿಂದ 2 ಲಕ್ಷಕ್ಕೆ ಹೆಚ್ಚಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: IIT/IIM/IISC/NIT ಯಂತಹ ರಾಷ್ಟ್ರೀಯ ಸಂಸ್ಥೆಗಳಲ್ಲಿ ಓದುವ ಖಅ/ಖಖ ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು 1 ರಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಿ ಸರ್ಕಾರವು ಆದ–ೇಶ ಹೊರಡಿಸಿದ್ದು ಇದು ಪರಿಶಿಷ್ಟ ಸಮುದಾಯದ ವಿದ್ಯಾರ್ಥಿಗಳ ಹೆಚ್ಚಿನ ಶೈಕ್ಷಣಿಕ ಸಾಧನೆಗೆ ಕಾರಣವಾಗಲಿದೆ ಎಂದು ಸಮಾಜ ಕಲ್ಯಾಣ ಸಚಿವರಾದ ಡಾ ಹೆಚ್ ಸಿ ಮಹದೇವಪ್ಪನವರು ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ.

ಇನ್ನು ಪಿಯುಸಿ ಪರೀಕ್ಷೆಯಲ್ಲಿ 95 ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದು, ನೀಟ್ ಪ್ರವೇಶ ಪರೀಕ್ಷೆಯ ಮೂಲಕ ಸರ್ಕಾರಿ ಕೋಟಾದಡಿ ಪ್ರವೇಶ ದೊರಕದೇ ಮ್ಯಾನೇಜ್ ಮೆಂಟ್ ಕೋಟಾದಡಿ ಎಂಬಿಬಿಎಸ್ ಕೋರ್ಸ್ ಗೆ ಸೀಟು ಪಡೆದು ಕೊಂಡ ಪರಿಶಿಷ್ಟ ಜಾತಿಯ ಮಕ್ಕಳಿಗೆ 25 ಲಕ್ಷ ರೂಪಾಯಿಗಳ ಶುಲ್ಕ ಧನವನ್ನು ಒದಗಿಸಲು ಸರ್ಕಾರ ತೀರ್ಮಾನಿಸಿದೆ. ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಮೊದಲ ವರ್ಷ 60% ಗೂ ಹೆಚ್ಚಿನ ಅಂಕಗಳನ್ನು ಪಡೆದು ಉತ್ತೀರ್ಣ ರಾದರೆ ಅವ–ರಿಗೆ ಅವರಿಗೆ ಮತ್ತೆ 25 ಲಕ್ಷ ರೂಪಾಯಿಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಶಿಕ್ಷಣವೇ ಸಮಾಜವನ್ನು ಬದಲಿಸುವ ಕೀಲಿಕೈ ಎಂಬ ಅಂಶವನ್ನು ಮನಗಂಡು ಈ ಒಂದು ಮಹತ್ವದ ಘೋಷಣೆಯನ್ನು ಸರ್ಕಾರವು ಮಾಡಿದ್ದು, ಇದ–ರಿಂದ ಉನ್ನತ ಶಿಕ್ಷಣ ಪಡೆಯಬೇಕೆಂಬ ವಿದ್ಯಾರ್ಥಿಗಳ ಕನಸ್ಸು ನನಸಾಗಲಿದೆ.ಐಐಟಿ ಐಐಎಂ ನಂತಹ ಶಿಕ್ಷಣ ಸಂಸ್ಥೆಗಳಲ್ಲಿ ಓದುವಂತಹ ಪರಿಶಿಷ್ಟ ಜಾತಿ ಮತ್ತು ಪಂಗಡದ ಮಕ್ಕಳು ದೇಶ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಬೇಕು, ಆ ಮೂಲಕ ಸಮೃದ್ಧ ಮತ್ತು ಸಶಕ್ತ ರಾಷ್ಟ್ರದ ನಿರ್ಮಾಣವಾಗಬೇಕು ಎಂದು ಮಾನ್ಯ ಸಚಿವರು ತಿಳಿಸಿದರು. ಇನ್ನು ಬಡತನದ ಬೇಗೆಗೆ ಸಿಲುಕಿ ಎಂಬಿಬಿಎಸ್ ಓದುವ ಬಯಕೆ ಇರುವಂತಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರಿ ಕೋಟಾದಡಿ ಸೀಟು ಸಿಗದೇ ಅವರು ಖಾಸಗೀ ಸಂಸ್ಥೆಗಳಲ್ಲಿ ಓದುತ್ತಿದ್ದರೆ, ಅಂತಹ ಪ್ರತಿಭಾವಂತ ಮಕ್ಕಳ ಶುಲ್ಕವನ್ನು ಸರ್ಕಾರ ಭರಿಸಲಿದ್ದು, ಇದಕ್ಕಾಗಿ ಆರಂಭಿಕವಾಗಿ 25 ಲಕ್ಷ ರೂಪಾಯಿಗಳನ್ನು ನೀಡುವ ನಿರ್ಧಾರವನ್ನು ತೆಗೆದುಕೊಂಡಿದೆ.ಈಗಾಗಲೇ ಪ್ರಬುದ್ಧ ಯೋಜನೆಯಡಿ ವಿದೇಶಿ ವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಹೆಚ್ಚಿಸಿರುವ ನಮ್ಮ ಸರ್ಕಾರವು ಇದೀಗ ಮಕ್ಕಳ ಉತ್ತಮ ಶಿಕ್ಷಣವನ್ನು ಗಮನದಲ್ಲಿಟು ಕೊಂಡು ಮುಖ್ಯ ಘೋಷಣೆಯನ್ನು ಮಾಡಿರುತ್ತದೆ.

ಹೀಗಾಗಿ ಬಾಬಾ ಸಾಹೇಬರ ಆಶಯದಂತೆ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ನಿಟ್ಟಿನಲ್ಲಿ ಹೆಚ್ಚು ಆಸಕ್ತಿ ಹೊಂದಿ, ಶ್ರಮ ಹಾಕಿ ಓದಬೇಕೆಂದು ಸಚಿವರು ಆಶಯವನ್ನು ವ್ಯಕ್ತಪಡಿಸಿದ್ದಾರೆ.

# ಓತಿಹಾಳ: ಪಿಕೆಪಿಎಸ್ ಇಓ ಹೂಗಾರ ವಜಾಗೊಳಿಸಲು ಆಗ್ರಹಿಸಿ ಧರಣಿ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಓತಿಹಾಳ ಪಿಕೆಪಿಎಸ್ ಸಂಘದಲ್ಲಿ ಹಣ ದುರುಪಯೋಗ ಮಾಡಿಕೊಂಡು ಇಲಾಖೆಯಿಂದ ಸಾಬೀತಾಗಿ ಸಂಘದಿಂದ ವಜಾಗೊಂಡ ಮಾಜಿ ಮುಖ್ಯ ಕಾರ್ಯನಿರ್ವಾಹಣ ಅಧಿಕಾರಿ ಅಂಬಣ್ಣ ಶಂ. ಹೂಗಾರ ಅವರನ್ನು ಕಾನೂನು ಬಾಹಿರವಾಗಿ ನೇಮಕ ಮಾಡಿಕೊಂಡ ಸದ್ಯದ ಆಡಳಿತ ಮಂಡಳಿಯವರು ಇವರನ್ನು ವಜಾಗೊಳಿಸಬೇಕು ಎಂದು ಬಾಬು ನಾಟೀಕಾರ ಆಗ್ರಹಿಸಿದರು.

ತಾಲೂಕಿನ ಓತಿಹಾಳ ಗ್ರಾಮದ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರಿ ಸಂಘದ ಆವರಣದಲ್ಲಿ ಹಮ್ಮಿಕೊಂಡ ಅನಿರ್ಧಿಷ್ಠಾವದಿ ಧರಣಿ ಸತ್ಯಾಗ್ರಹದಲ್ಲಿ ಮಾತನಾಡಿದ ಅವರು, ಕಾನೂನು ಬಾಹಿರವಾಗಿ ಅವರನ್ನು ನೇಮಕ ಮಾಡಿಕೊಂಡ ವ್ಯವಸ್ಥೆಯ ವಿರುದ್ಧ ಶಿಸ್ತಿನ ಕ್ರಮಕೈಗೊಳ್ಳಬೇಕು ಎಂಬ ಉದ್ದೇಶದಿಂದ ಈ ಧರಣಿ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದೆ. ಇಲಾಖೆ ನಮ್ಮ ಧರಣಿ ಸತ್ಯಾಗ್ರಹಕ್ಕೆ ಒಗೊಟ್ಟು ಕಾನೂನಾತ್ಮಕವಾಗಿ ಸೂಕ್ತ ನ್ಯಾಯವನ್ನು ಒದಗಿಸಬೇಕು ಎಂದರು. ಈ ವೇಳೆ ಬ್ಯಾಂಕಿನ ಆಡಳಿತ ಮಂಡಳಿಯ ಸದಸ್ಯರಾದ ಅಶೋಕ ಮಣೂರ, ಸೋಮಣ್ಣ ಪೂಜಾರಿ, ಭೀಮರಾಯ ಮಕಣಾಪೂರ, ನೀಲಮ್ಮ ನಾಕೆತ್ತಿನ, ಸಂಗಮ ಕೊರಬು, ಸಿದ್ದಮ್ಮ ನಾಟೀಕಾರ, ಗ್ರಾಮ ಪಂಚಾಯತ್ ಸದಸ್ಯರಾದ ಸುವರ್ಣಾ ಮಕಣಾಪೂರ, ಜಗದೀಶ ಮಾಲೇಗಾರ, ಮಲ್ಲು ನಾಕೆತ್ತಿನ, ಆಸೀಫ್ ಗುಂಜ–ಟ್ಟಿ, ರಾಜು ವಠಾರ, ಗ್ರಾಮದ ರೈತ ಮುಖಂಡ ಮಲ್ಲನಗೌಟ ಪಾಟೀಲ, ಬಾಬು ನಾಟೀಕಾರ, ಶಂಕರಗೌಡ ಜುಮನಾಳ, ಶಿವಾನಂದ ಸಾಳಿಮಠ ಸೇರಿದಂತೆ ಅನೇಕರಿದ್ದರು.

# ಭಾವಿಯಲ್ಲಿ ಬಿದ್ದ ಎಮ್ಮೆ ರಕ್ಷಿಸಿದ ಅಗ್ನಿಶಾಮಕ ಸಿಬ್ಬಂದಿ

■ ಉದಯರಶ್ಮಿ ದಿನಪತ್ರಿಕೆ

ಬಸವನಬಾಗೇವಾಡಿ: ತಾಲೂಕಿನ ನರಸಲಗಿ ಗ್ರಾಮದ ಶ್ರೀಶೈಲಗೌಡ ಹೊಸಳ್ಳಿ ಅವರ ತೋಟದ ಭಾವಿಯಲ್ಲಿ ಬುಧವಾರ ಆಕಸ್ಮಿಕವಾಗಿ ಬಿದ್ದ ಎಮ್ಮೆಯನ್ನು ಸ್ಥಳೀಯ ಅಗ್ನಿ ಶಾಮಕ ಠಾಣೆಯ ಸಿಬ್ಬಂದಿ ತೆರಳಿ ಕಾರ್ಯಾಚರಣೆ ನಡೆಸಿ ಸುರಕ್ಷಿತವಾಗಿ ಎಮ್ಮೆಯನ್ನು ರಕ್ಷಿಸಿದರು. ಈ ಕಾರ್ಯಾಚರಣೆಯಲ್ಲಿ ಅಗ್ನಿಶಾಮಕ ಠಾಣಾಧಿಕಾರಿ ಸಂಗಮೇಶ ಶಿವಪೂಜಿ, ಸಿಬ್ಬಂದಿಗಳಾದ ಬಸಪ್ಪ ಜಾಲಗೇರಿ, ಉಮೇಶ ಹೂಗಾರ, ಚಂದ್ರಗುಪ್ತ ಅಂಬಳನೂರ ಶ್ರೀಕಾಂತ ಅಂಕಲಗಿ, ಯಮನಪ್ಪ ಹೊಲೇರ ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR